# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 170 | Volume - 01 Issue - 170
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 19–01–2024 ಶುಕ್ರವಾರ | Date: 19-01-2024 Friday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



**ಒಳಪುಟದ ಸುದ್ದಿಗಳು**

ಉದ್ಯಮ ಕ್ಷೇತ್ರದ ಕಡೆ ಯುವ ಸಮೂಹ ಹೆಜ್ಜೆ ಹಾಕಬೇಕು: ಪಿ.ವಿ.ಅರುಣ್ ಕುಮಾರ್ 2

ಆರ್ಥಿಕ ಸಬಲತೆ ಸಾಧಿಸಿ: ಜಿಲ್ಲಾ ನ್ಯಾಯಾಧೀಶೆ ಕೆ.ಬಿ.ಗೀತಾ 3

ಗಣತಂತ್ರ ವ್ಯವಸ್ಥೆ ದೇಶದ ಐಕ್ಯತೆ ಮತ್ತು ಅಖಂಡತೆಗೆ ಭದ್ರ ಬುನಾದಿ: ಪಾಟೀಲ್ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಜೀವನ ಒಂದು ಚದುರಂಗದಾಟ
ನಾವೇನಿದ್ದರೂ ಚದುರಂಗದ
ಕಾಯಿಗಳು, ಆಡುವುದೇನಿದ್ದರೂ
ಭಗವಂತನದೇ ಆಟ, ಅವನ ಆಟದ
ಮುಂದೆ ನಮ್ಮದೇನು ಇಲ್ಲ,
ಎಲ್ಲವೂ ಶೂನ್ಯ,,,,

# 23ರಂದು ಚಿತ್ರದುರ್ಗ ಬಂದ್‌ಗೆ ಕರೆ

## ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ನಿರ್ಣಯ –ಇಪ್ಪತ್ತಕ್ಕೂ ಹೆಚ್ಚು ಸಂಘಟನೆಗಳಿಂದ ಬೆಂಬಲ

» **ಚಿತ್ರದುರ್ಗ**

ಭದ್ರಾಮೇಲ್ದಂಡೆಶೀಘ್ರಕಾರ್ಯಾನುಷ್ಠಾನಕ್ಕೆ ಆಗ್ರಹಿಸಿ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಜನವರಿ 23 ರ ಮಂಗಳವಾರ ಚಿತ್ರದುರ್ಗ ಬಂದ್ ಕರೆ ನೀಡಿದೆ. ಸಮಿತಿ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ಅಧ್ಯಕ್ಷತೆಯಲ್ಲಿ ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ನಡೆದ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.20 ಕ್ಕೂ ಹೆಚ್ಚು ಸಂಘಟನೆಗಳ ಮುಖ್ಯಸ್ಥರು ಸಭೆಯಲ್ಲಿ ಪಾಲ್ಗೊಂಡಿದ್ದರು.



ಸಭೆಯ ಆರಂಭದಲ್ಲಿ ವಿಷಯ ಪ್ರಸ್ತಾಪಿಸಿದ ಸಮಿತಿ ಅಧ್ಯಕ್ಷ ಲಿಂಗಾರೆಡ್ಡಿ, ಭದ್ರಾ ಮೇಲ್ದಂಡೆಯ ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಿ 5300 ಕೋಟಿ ರುಪಾಯಿ ನೆರವು ನೀಡುವುದಾಗಿ ಸ್ವತಹ ಪ್ರ▯▯▯▯ ಮಂತ್ರಿಗಳು ಕಳೆದ ವರ್ಷ ಚಿತ್ರದುರ್ಗಕ್ಕೆ ಆಗಮಿಸಿ ಹೇಳಿಕೆ ನೀಣಟಿಜಜಜಿಟಿಜಜಡಿದ್ದರು. ವರ್ಷಗಳಾಗುತ್ತಾಬಂದರೂಅನುದಾನವೇ ಬಿಡುಗಡೆಯಾಗಿಲ್ಲ. ಕೇಂದ್ರ ಸರ್ಕಾರ ಮತ್ತೊಂದು ಬಜೆಟ್ ಮಂಡಿಸಲು ಮುಂದಾಗಿದ್ದು ಕಳೆದ ಬಜೆಟ್ ಘೋಷಣೆ ಜಾರಿಗೆ ಬಂದಿಲ್ಲವೆಂದು ಅಸಮಧಾನ ವ್ಯಕ್ತಪಡಿಸಿದರು.

ಭದ್ರಾಣಟಿಜಜಜಿಟಿಜಜ ಮೇಲ್ದಂಡೆ ವಿಚಾರಲ್ಲಿ ರಾಜ್ಯ ಸರ್ಕಾರ ಕೂಡಾ ಉದಾಸೀನ ತೋರಿದೆ. ಕೇಂದ್ರದ ಅನುದಾನ ನಿರೀಕ್ಷೆಯಲ್ಲಿ ತನ್ನ ಜವಾಬ್ದಾರಿ ಮರೆತಿದೆ. ಕಳೆದ ಒಂದು ವರ್ಷದಿಂದ ಬಿಡಿಗಾಸು ಬಿಡುಗಡೆ ಮಾಡಿಲ್ಲ. ಭೂ ಸ್ವಾಧೀನದ ಸಮಸ್ಯೆ ಬಗೆ ಹರಿಸಿಲ್ಲ. ಬರೀ ಸುಳ್ಳುಗಳ ಹೇಳಿಕೊಂಡು ಕಾಲ ಹರಣ ಮಾಡುತ್ತಿದೆ ಎಂದು ದೂರಿದರು.

ರೈತ ಸಂಘದ ರಾಜ್ಯ ಮುಖಡ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಮಾತನಾಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಮನವಿ ಕೊಟ್ಟು ಸಾಕಾಗಿದೆ. ಪ್ರತಿಭಟನೆ ಮೂಲಕ ಎರಡೂ ಸರ್ಕಾರಗಳಿಗೆ ಎಚ್ಚರಿಕೆ ಸಂದೇಶ ರವಾನೆ ಮಾಡಬೇಕಿದೆ. ಚಿತ್ರದುರ್ಗ ಬಂದ್ ಇದಕ್ಕೂ ಸೂಕ್ತ ಪ್ರತಿಕ್ರಿಯೆಯಾಗಿದೆ. ಈ ನಿಟ್ಟಿನಲ್ಲಿ ನಿರ್ಣಯ ಕೈಗೊಳ್ಳೋಣವೆಂದರು. ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ಮಾತನಾಡಿ, ಪ್ರತಿಭಟನೆ ನಡೆಸಿ ಭಾಷಣ ಮಾಡುವುದರಿಂದ ಉಪಯೋಗವಾಗುವುದಿಲ್ಲ. ಮೊದಲು ಚಿತ್ರದುರ್ಗ ಬಂದ್ ಮಾಡುವ. ನಂತರ ಎಲ್ಲ ತಾಲೂಕುಗಳಿಗೆ ವಿಸ್ತರಣೆ ಮಾಡೋಣವೆಂದರು.

ಸ್ವರಾಜ್ ಇಂಡಿಯಾದ ಮುಖ್ಯಸ್ಥ ಜೆ.ಯಾದವರೆಡ್ಡಿ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಚಿತ್ರದುರ್ಗ ಜಿಲ್ಲೆಯ ಜನರಿಗೆ ದ್ರೋಹವೆಸಗಿವೆ. ರಾಷ್ಟ್ರೀಯ ಯೋಜನೆ ಮಾಡುವುದಾಗಿ ಹೇಳಿ ಕೇಂದ್ರ ಸರ್ಕಾರ ಮಂಕುಬೂದಿ ಎರಚಿವೆ. ಎತ್ತಿನ ಹೊಳೆ ಯೋಜನೆ ಗಂಭೀರವಾಗಿ ತೆಗೆದುಕೊಂಡು ಕಾಮಗಾರಿ ಚುರುಕುಗೊಳಿಸಿರುವ ರಾಜ್ಯಸರ್ಕಾರ ಭದ್ರಾ ಮೇಲ್ದಂಡೆ ವಿಚಾರದಲ್ಲಿ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎಂದು ದೂರಿದರು.

ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೇಸ್ವಾಮಿ ಮಾತನಾಡಿ, ಚಿತ್ರದುರ್ಗ ಜಿಲ್ಲೆಯ ರೈತಾಪಿ ಜನರ ಅಳಿವು ಉಳಿವಿನ ಪ್ರಶ್ನೆ ಇದಾಗಿದ್ದು ಸರ್ಕಾರಗಳ ಎಚ್ಚರಿಸಲೇ ಬೇಕಾಗಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್ ಫೀರ್ ಮಾತನಾಡಿ ಜನವರಿ 28 ರಂದು ಸಿಎಂ ಚಿತ್ರದುರ್ಗಕ್ಕೆ ಬರಲಿದ್ದು ಮೊದಲ ಹಂತದಲ್ಲಿ ಅವರಿಗೆ ಮನವಿ ಮಾಡಿಕೊಳ್ಳೋಣ. ನಂತರದಲ್ಲಿ ಹೋರಾಟದ ರೂಪುರೇಷಗಳ ಸಿದ್ದಪಡಿಸೋಣವೆಂದರು. ಅಂತಿಮವಾಗಿ ಜನವರಿ 23 ರ ಮಂಗಳವಾರ ಚಿತ್ರದುರ್ಗ ಬಂದ್ ಗೆ ನಿರ್ಣಯ ಕೈಗೊಳ್ಳಲಾಯಿತು.

ಸ್ವಯಂ ಪ್ರೇರಿತ ಬಂದ್ ಇದಾಗಿದ್ದು ಅಹಿತಕರ ಘಟನೆಗಳು ನಡೆಯದಂತೆ ಎಚ್ಚರವಹಿಸೋಣ. ಎಲ್ಲ ಸಂಘಸಂಸ್ಥೆಗಳು, ಹೋಟೆಲ್ ಮಾಲೀಕರು, ಖಾಸಗಿ ಬಸ್ ಮಾಲೀಕರು, ವರ್ತಕರು ಸ್ವಯಂ ಪ್ರೇರಿತ ಬಂದ್ ನಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಿಕೊಳ್ಳಲು ಸಭೆ ತೀರ್ಮಾನಿಸಿತು.

ರೈತ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಕೆ.ಸಿ.ಹೊರಕೇರಪ್ಪ,ತಾಲೂಕು ಅಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಕಟ್ಟಡ ಕಾರ್ಮಿಕರ ಸಂಘದ ವೈ. ಕುಮಾರ್, ಹಮಾಲರ ಸಂಘದ ಅಧ್ಯಕ್ಷ ಬಿ.ಬಸವರಾಜಪ್ಪ, ಸಿಪಿಐ ಜಿಲ್ಲಾ ಕಾರ್ಯದರ್ಶಿ ಸುರೇಶ್ ಬಾಬು,ಎಐಟಿಯುಸಿ ರಾಜಪ್ಪ, ಸತ್ಯಕೀರ್ತಿ, ಜನಶಕ್ತಿ ಸಂಘಟನೆಯ ಷಫಿವುಲ್ಲಾ, ಪುರೋಷೋತ್ತಮ, ಕರವೇ ಸಂಘಟನೆಯ ಜಿಲ್ಲಾಧ್ಯಕ್ಷರುಗಳಾದ ರಮೇಶ್, ಎಸ್. ಕೆ.ಮಹಂತೇಶ್,ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಶಿವಕುಮಾರ್, ಲಕ್ಷ್ಮಿಕಾಂತ, ಲಿಂಗಾವರಟ್ಟಿ ಇ.ಎನ್.ಲಕ್ಷ್ಮಿಕಾಂತ, ಹಿರಿಯ ಸಂಗೀತ ಕಲಾವಿದ ಎಸ್.ವಿ.ಗುರುಮೂರ್ತಿ, ಕೋನಸಾಗರ ಮಂಜುನಾಥ್, ರೈತ ಸಂಘದ ಉಪಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಮಲ್ಲಿಕಾರ್ಜುನ, ಲಕ್ಷ್ಮಿಸಾಗರ ಚೌಡಪ್ಪ,ಅನಂತರಾಜ್, ಮಹೇಂದ್ರಕುಮಾರ್, ಸುಧಿ ಡಿ.ಎಸ್ ಹಳ್ಳಿ, ಸಮೀವುಲ್ಲ, ಎಸ್. ಕೆ.ಕುಮಾರಸ್ವಾಮಿ, ಬ್ಯಾಡರಹಳ್ಳಿ ನಿತ್ಯಶ್ರೀ, ಕಾಂಗ್ರೆಸ್ ಮುಖಂಡರಾದ ಸೈಯದ್ ಖುದ್ದೂಸ್, ಪ್ರಕಾಶ್ ರಾಮನಾಯ್ಕ, ಬೀದಿ ಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಸಮೀವುಲ್ಲಾ ಷರೀಫ್, ಜಿ.ಆರ್ ಪಾಪಯ್ಯ, ಬ್ಲಾಕ್ ಕಾಂಗ್ರೆಸ್ ನ ಡಾ.ರಹಮತುಲ್ಲಾ, ಜಿಪಂ ಮಾಜಿ ಅಧ್ಯಕ್ಷ ರವಿಕುಮಾರ್, ಕೋಗುಂಡೆ ರವಿಕುಮಾರ್, ಹಂಪಯ್ಯನಮಾಳಿಗೆ ರೇವಣ್ಣ, ಕೃಷ್ಣಪ್ಪ ಸಭೆಯಲ್ಲಿ ಪಾಲ್ಗೊಂದ್ದರು.

**ಫಾಸ್ಟ್ ನ್ಯೂಸ್**

## ಇಂದು ವಾಲ್ಮೀಕಿ ಜಾತ್ರೆ ಪೂರ್ವಬಾವಿ ಸಭೆ

» **ಚಿತ್ರದುರ್ಗ**



ಪ್ರತಿ ವರ್ಷದಂತೆ ಈ ಬಾರಿಯ ವಾಲ್ಮೀಕಿ ಜಾತ್ರೆ ಪ್ರಯುಕ್ತ 19–1–2023ನೇ ಶುಕ್ರವಾರ ಬೆಳಗ್ಗೆ ತಾಲೂಕು ಕಚೇರಿ ಮುಂಭಾಗದ ನಗರದ ಪ್ರವಾಸಿ ಮಂದಿರದಲ್ಲಿ ವಾಲ್ಮೀಕಿ ಸಮಾಜದ ವಾಲ್ಮೀಕಿ ಜಾತ್ರೆ ಪ್ರಯುಕ್ತ ಈ ಬಾರಿಯ ಚಿತ್ರದುರ್ಗ ತಾಲ್ಲೂಕು ವಾಲ್ಮೀಕಿ ಜಾತ್ರಾ ಸಮಿತಿಯ ಅಧ್ಯಕ್ಷರಾದ ಬಾಲೆನಹಳ್ಳಿ ತಿಪ್ಪೇಸ್ವಾಮಿ ಅವರ ನೇತೃತ್ವದಲ್ಲಿ ಸಭೆ ಹಮ್ಮಿಕೊಂಡಿದ್ದು ಬೆಳಗ್ಗೆ 11 ಗಂಟೆ ಸಮಾಜದ ಮುಖಂಡರು ಮತ್ತು ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪೂರ್ವಭಾವಿ ಸಭೆಗೆ ಭಾಗವಹಿಸಿ ಸಲಹೆ ಸೂಚನೆ ನೀಡಬೇಕೆಂದು ಜಾತ್ರೆ ಸಮಿತಿ ಅಧ್ಯಕ್ಷರಾದ ತಿಪ್ಪೇಸ್ವಾಮಿ ಕೋರಿದ್ದಾರೆ

## ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ

» **ಚಿತ್ರದುರ್ಗ**

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ (ಜಿಟಿಟಿಸಿ) ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಡಿಪ್ಲೋಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇನ್ ಕೋರ್ಸ್ ಹಾಗೂ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈಮೇಕಿಂಗ್ ವಿಭಾಗದಲ್ಲಿ ಖಾಲಿ ಇರುವ ಅತಿಥಿ ಉಪನ್ಯಾಸಕ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 25 ಅರ್ಜಿ ಸಲ್ಲಿಸಲು ಕೊನೆಯ ದಿನ. ಚಿತ್ರದುರ್ಗ ಜಿಟಿಟಿಸಿ ಕೇಂದ್ರದಲ್ಲಿ 2024–24ರ ಶೈಕ್ಷಣಿಕ ಸಾಲಿಗೆ ಡಿಪ್ಲೋಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇನ್ ಕೋರ್ಸ್ ಪ್ರಾರಂಭಿಸಲು ಉದ್ದೇಶಿಸಿದ್ದು, ಈ ಕೋರ್ಸ್‌ಗೆ ಬಿ.ಇ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯೂನಿಕೇಷನ್ ಅಥವಾ ಎಂ.ಟೆಕ್ ಇನ್ ಎಲೆಕ್ಟ್ರಾನಿಕ್ಸ್ ಅಥವಾ ಅಲೈಡ್ ಕೋರ್ಸ್ ವಿದ್ಯಾರ್ಹತೆ ಆದ 3 ಜನ ಅತಿಥಿ ಉಪನ್ಯಾಸಕರು ಹಾಗೂ ಧೀರ್ಘಾವಧಿ ಕೋರ್ಸ್ ಆದ ಡಿಟಿಡಿಎಮ್ (ಡಿಪ್ಲೋಮಾ ಇನ್ ಟೂಲ್ ಅಂಡ್ ಡೈಮೇಕಿಂಗ್ ಕೋರ್ಸ್‌ಗೆ 1 ಬೋಧಕರ ಅವಶ್ಯಕತೆ ಇರುತ್ತದೆ. ಆಸಕ್ತ ಅಭ್ಯರ್ಥಿಗಳು ಜನವರಿ 25ರೊಳಗೆ ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಸರ್ವೆ ನಂ.44, ಹಳೆಯ ಬೆಂಗಳೂರು ರಸ್ತೆ, ಕಣಿವೆಮಾರಮ್ಮ ದೇವಸ್ಥಾನದ ಹಿಂಭಾಗ, ಕುಂಚಿಗನಾಳ್, ಚಿತ್ರದುರ್ಗ ಈ ವಿಳಾಸಕ್ಕೆ ತಮ್ಮ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9481866855, 9945616114 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ತಿಳಿಸಿದ್ದಾರೆ.

## ಸೇವೆಯಲ್ಲಿ ವಿಕಲಾಂಗತೆ ಹೊಂದಿರುವ ಮಾಜಿ ಸೈನಿಕರ ವಿವರ ನೀಡಿ

» **ಚಿತ್ರದುರ್ಗ**

ಎನಬಲ್ ಇಂಡಿಯಾ ಆರ್ಗನೈಸೇಷನ್ ಅವರು ಯುದ್ಧ, ಯುದ್ಧದಂತಹ ಕಾರ್ಯಾಚರಣೆ ಹಾಗೂ ಸಾಮಾನ್ಯ ಸೇವೆಗೆ ಸಂಬಂಧಿಸಿದಂತೆ ತೀವ್ರವಾಗಿ ಗಾಯಗೊಂಡು 50 ಪ್ರತಿಶತಕ್ಕಿಂತ ಹೆಚ್ಚು ಅಧಿಕ ವಿಕಲಾಂಗತೆ ಹೊಂದಿರುವ 45 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಾಜಿ ಸೈನಿಕರಿಗೆ ಕೌಶಲ್ಯ ಅಭಿವೃದ್ಧಿ, ಸಮಾಲೋಚನೆ ಹಾಗೂ ಜೀವನೋಪಾಯಗಳಂತಹ ತರಬೇತಿ ನೀಡಲು ತರಬೇತಿ ನೀಡಲು ಆಸಕ್ತರ ವಿವರಗಳನ್ನು ಕೋರಿದ್ದಾರೆ. ಆಸಕ್ತರು ಜ.19 ರೊಳಗೆ ಸಂಬಂಧಿತ ವೈದ್ಯಕೀಯ ದಾಖಲೆ ಹಾಗೂ ಸೇವಾ ಪುಸ್ತಕ ವಿವರಗಳೊಂದಿಗೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಅವರ ದೂರವಾಣಿ ಸಂಖ್ಯೆ 08182–220925 ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಬಸವಣ್ಣ ಕರ್ನಾಟಕದ ಸಾಂಸ್ಕೃತಿಕ ನಾಯಕ: ಸಚಿವ ಸಂಪುಟದ ಒಪ್ಪಿಗೆ

## ಇಂದು ನಡೆದ ಸಚಿವ ಸಂಪುಟದ ಪ್ರಮುಖ ನಿರ್ಣಯಗಳು

» **ಬೆಂಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಇಂದು ಸಚಿವ ಸಂಪುಟ ಸಭೆ ಜರುಗಿತು.

**ಪ್ರಮುಖ ನಿರ್ಣಯಗಳು**

- **ಗೃಹ ಜ್ಯೋತಿ ಯೋಜನೆಯ ಅನುಷ್ಠಾನ ಕುರಿತು ದಿನಾಂಕ 5.6.2023 ರಂದು ಹೊರಡಿಸಿರುವ ಸರ್ಕಾರಿ ಆದೇಶವನ್ನು ಮಾರ್ಪಡಿಸಿ ಮಾಸಿಕ 48 ಯೂನಿಟ್ ಗಳಿಗಿಂತ ಕಡಿಮೆ ಬಳಸುವ ಐಚಿ 2 ಗ್ರಾಹಕರಿಗೆ ಹೆಚ್ವರಿ 10 % ಬದಲಿಗೆ ಹೆಚ್ಚುವರಿ 10 ಯೂನಿಟ್ ಅರ್ಹತಾ ಯೂನಿಟ್ ಗಳನ್ನು ಒದಗಿಸಲು ಸಚಿವ ಸಂಪುಟ ನಿರ್ಧರಿಸಿದೆ.**
- **ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರನ್ನಾಗಿ ಘೋಷಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.**



- **ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ಷೇರು ಬಂಡವಾಳವನ್ನು ರೂ.600 ಕೋಟಿ ರೂ. ಗಳಿಂದ 1200 ಕೋಟಿ ರೂ.ಗಳಿಗೆ ಹೆಚ್ಚಿಸಲು ಸಚಿವ ಸಂಪುಟ ಅನುಮೋದಿಸಿದೆ.**


ಪುಟ ↘ 2





ಯುವ ಮುಖಂಡರಾದ ಜಿ.ಎಸ್ ಅನಿತ್ ಕುಮಾರ್ ರವರು ಇಂದು ಚಿತ್ರದುರ್ಗ ಜಿಲ್ಲಾ ಬಿಜೆಪಿ ಕಚೇರಿಗೆ ಭೇಟಿ ನೀಡಿ ನೂತನ ಅಧ್ಯಕ್ಷರಾಗಿ ಎರಡನೇ ಭಾರಿ ಆಯ್ಕೆಯಾದ ಎ ಮುರುಳಿ ರವರಿಗೆ ಅಭಿನಂದನೆ ಸಲ್ಲಿಸಿದರು. ಈ ಸಂಧರ್ಭದಲ್ಲಿ ಜಿಲ್ಲಾ ಬಿಜೆಪಿ ಮುಖಂಡರು ಗಳಾದ ನರೇಂದ್ರ ಹೋನ್ನಾಲ್,ಮಲ್ಲಿಕಾರ್ಜುನ್ , ಕಲ್ಲೇಷಯ್ಯ,ನಂದಿ ನಾಗರಾಜ್ , ಸಂಪತ್ ಕುಮಾರ್,ಸುರೇಶ್, ಮಹಿಳಾ ಮೋರ್ಚಾದ ಶೈಲಜ ರೆಡ್ಡಿ ರವರು ,ಕವನ ರವರು ,ಶೀಲಾ ರವರು ,ರಜನಿ ಲೆಪಕ್ಷಾ ರವರು ,ಬಸಮ್ಮ ರವರು ಹಾಗೂ ಭೀಮಸಮುದ್ರದ ಮಲ್ಲಿಕಾರ್ಜುನ್ .ಶರತ್,ಅಶೋಕ್ ಖಿ ಉ , ಅರುಣ್ ಹಾಗೂ ಕಾರ್ಯಕರ್ತರೂ ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಹೇರೂರು ಬಳಿ ಟೋಲ್ ನಿರ್ಮಾಣಕ್ಕೆ ವಿರೋಧ

» **ಹೊಸದುರ್ಗ**

ತಾಲೂಕಿನ ಹೊಳಲ್ಕೆರೆ ರಸ್ತೆಯ ಮಾರ್ಗದಲ್ಲಿರುವ ಹೇರೂರು ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ನಡೆಯುತ್ತಿರುವ ಹೆದ್ದಾರಿ ರಸ್ತೆಗೆ ಟೋಲ್ ನಿರ್ಮಾಣ ಮಾಡಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮುಂದಾಗಿದ್ದು, ಇಲ್ಲಿ ಟೋಲ್ ಪ್ಲಾಜಾವನ್ನು ಯಾವುದೇ ಕಾರಣಕ್ಕೂ ನಿರ್ಮಾಣಮಾಡಲು ನಾವು ಬಿಡುವುದಿಲ್ಲವೆಂದು ರೈತರು ಸ್ಥಳಕ್ಕೆ ಆಗಮಿಸಿದ ಪ್ರಾಧಿಕಾರದ ಅಧಿಕಾರಿಗಳಿಗೆ ಗೆರವು ಹಾಕಿದ ಪ್ರಸಂಗ ಗುರುವಾರ ನಡೆಯಿತು.



ಪರಿಶಿಷ್ಟ ಜಾತಿ ಮತ್ತು ಪಂಗಡದವರೇ ಹೆಚ್ಚು ವಾಸವಿರುವ ಗ್ರಾಮ ಹೇರೂರು. ಬೀಸನಹಳ್ಳಿ, ಮಾವಿನಕಟ್ಟೆ ಹಾಗೂ ಸುತ್ತಮುತ್ತದ ಗ್ರಾಮಗಳ ರೈತರು ಅರ್ಧ ಎಕರೆ, ಒಂದು ಎಕರೆ ಜಮೀನು ಹೊಂದಿದವರೇ ಹೆಚ್ಚು. ರೈತರು ಇರುವ ಜಮೀನನಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಟೋಲ್ ನಿರ್ಮಾಣ ಮಾಡಲು ಹೊರಟಿದ್ದು, ನಾವು ಯಾವುದೇ ಕಾರಣಕ್ಕೂ ನಮ್ಮ ಜಮೀನನ್ನು ಟೋಲ್ ನಿರ್ಮಿಸಲು ಬಿಟ್ಟು ಕೊಡುವುದಿಲ್ಲ.

ರೈತರಿಂದ ಜಮೀನು ಪಡೆದು, ರೈತರಿಂದಲೇ ರಸ್ತೆ ಅಭಿವೃದ್ಧಿ ಸುಂಕ ವಸೂಲಿ ಮಾಡುವ ಇಂತಹ ರಸ್ತೆ ನಮಗೆ ಬೇಡವೇ ಬೇಡ. ಈ ಹಿಂದೆ ಇದ್ದ ಹಳೆಯ ರಸ್ತೆಯೇ ಉತ್ತಮವಾಗಿತ್ತು. ನಮ್ಮ ಮನವಿಗೆ ಶಾಸಕರು, ಹಾಗೂ ಜಿಲ್ಲಾಧಿಕಾರಿಗಳು ಸ್ಪಂದಿಸಿ ಬಡ ರೈತರ ನೋವನ್ನು ಪರಿಹರಿಸಬೇಕಿದೆ ಎಂದು ಹೇರೂರಿನ ನೂರಾರು ರೈತರು ಸ್ಥಳದಲ್ಲಿಯೇ ಪ್ರತಿಭಟನೆ ನಡೆಸಿ, ಈ ಬಗ್ಗೆ ಹೆದ್ದಾರಿ ಪ್ರಾಧಿಕಾರದ ಇಂಜಿನಿಯರಿಗೆ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಮಲ್ಲಿಕಾರ್ಜುನ್,ವಿರ ೂಪಾಕ್ಷಪ್ಪ,ಪಾಲಾಕ್ಷಪ್ಪ, ಶಿವಕುಮಾರ್, ಸಿದ್ದಪ್ಪ, ದೊಡ್ಡರಂಗಪ್ಪ, ರಾಜಪ್ಪ, ಹನುಮಂತಪ್ಪ, ಕವಿತಾ, ದ್ರಾಕ್ಷಯಣಮ್ಮ, ಸುಲೋಚನಮ್ಮ, ಶಿವಪ್ಪ, ತಿಪ್ಪೇಶ್, ಚಿಕ್ಕಪ್ಪ, ಲಕ್ಕಪ್ಪ, ರಾಮಪ್ಪ, ಮುಜೀಬ್, ನಿಜಾಮ್, ವೀರೇಶ್ ಮತ್ತು ಗೋವಿಂದಪ್ಪ ಸೇರಿದಂತೆ ನೂರಾರು ರೈತರಿದ್ದರು.

> ಸರ್ಕಾರ ಎಸ್ಸಿ,ಎಸ್ಟಿ ಜಮೀನು ರಹಿತ ರೈತರಿಗೆ ಜಮೀನು ಕೊಡುತ್ತಿರುವ ಇಂತಹ ಸಮಯದಲ್ಲಿ, ನಮ್ಮಲ್ಲಿರುವ ಅಲ್ಪಸ್ವಲ್ಪ ಜಮೀನಿನಲ್ಲಿ ಉಳುಮೆ ಮಾಡಿಕೊಂಡು ಮಕ್ಕಳ ವಿದ್ಯಾಭ್ಯಾಸ ಮಾಡಿಸಿಕೊಂಡು ಬದುಕುತ್ತಿದ್ದೇವೆ. ಇಂತಹ ಸಂದರ್ಭದಲ್ಲಿ ರಾಷ್ಟ್ರೀಯ ಅಭಿವೃದ್ಧಿ ಪ್ರಾಧಿಕಾರ ನಮ್ಮ ಜಮೀನು ವಶಪಡಿಸಿಕೊಳ್ಳಲು ಮುಂದಾಗಿದೆ. ಯಾವುದೇ ಕಾರಣಕ್ಕೂ ನಮ್ಮ ಪ್ರಾಣವನ್ನಾದರೂ ಕೊಟ್ಟೆವು, ಜಮೀನು ನಾವು ಬಿಟ್ಟುಕೊಡುವುದಿಲ್ಲ.
>
> » **ಶಿವಕುಮಾರ್. ಹೇರೂರು ಗ್ರಾಮದ ರೈತ**





## ಫಾಸ್ಟ್ ನ್ಯೂಸ್

### ಬಸವಣ್ಣ ಕರ್ನಾಟಕದ ಸಾಂಸ್ಕೃತಿಕ ನಾಯಕ: ಸಚಿವ ಸಂಪುಟದ ಒಪ್ಪಿಗೆ

» ಮೊದಲ ಪುಟದಿಂದ

- ಉಡುಪಿ ನ್ಯಾಯಾಲಯದ ಆವರಣದಲ್ಲಿ ವಕೀಲರ ಭವನ ಮತ್ತು ಎ.ಡಿ.ಆರ್ ಸಂಕೀರ್ಣ ವನ್ನೊಳಗೊಂಡ ಅನೆಕ್ಸ್ ನ್ಯಾಯಾಲಯದ ಕಟ್ಟಡ ನಿರ್ಮಾಣ ಕಾಮಗಾರಿ ( ಪ್ರಥಮ ಹಂತ) ರೂ.15.14 ಕೋಟಿಗಳ ಅಂದಾಜುಪಟ್ಟಿಗೆ ನ್ಯಾಯಾಲಯ ಕಟ್ಟಡಗಳ ನಿರ್ಮಾಣಕ್ಕೆ ಸಚಿವ ಸಂಪುಟದ ಒಪ್ಪಿಗೆ
- ವಿಜಯನಗರ ಜಿಲ್ಲೆ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ ಪಿ.ಹೆಚ್ ಗ್ರಾಮದ ಹೆಸರನ್ನು *ಆರೂಢ ನಂದಿಹಾಳ* ಎಂದು ಮರುನಾಮಕರಣ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ
- ಚಿಕ್ಕಮಗಳೂರು ಜಿಲ್ಲೆಯ ಐ.ಡಿ.ಪೀಠದ ಶ್ರೀ ಗುರುದತ್ತಾತ್ರೆಯ ಬಾಬಾ ಬುಡನ್ ಸ್ವಾಮಿ ದರ್ಗಾ ಅಧಿಸೂಚಿತ ಸಂಸ್ಥೆಗೆ ಶ್ರೀ ಸೈಯದ್ಗೌಸ್ ಮೊಹಿಯುದ್ದೀನ್ ಶಾಖಾದ್ರಿ ಇವರು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಎಸ್ ಎಲ್ ಪಿ ಪ್ರಕರಣದಲ್ಲಿ ಸರ್ಕಾರದ ನಿಲುವನ್ನು ವ್ಯಕ್ತಪಡಿಸಲು, ಪ್ರಕರಣದ ಸಮಗ್ರ ಪರಿಶೀಲನೆ ನಡೆಸಿ ಶಿಫಾರಸ್ಸು ನೀಡಲು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಸಮಿತಿಯ ಅಧ್ಯಕ್ಷರಾಗಿ ಗೃಹ ಸಚಿವರು, ಸದಸ್ಯರಾಗಿ ಕಾನೂನು ಸಚಿವರು, ಸಾರಿಗೆ ಸಚಿವರು , ಕಂದಾಯ ಸಚಿವರು ಹಾಗೂ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವರನ್ನು ನೇಮಿಸುವ ನಿರ್ಣಯ ಕೈಗೊಳ್ಳಲಾಗಿದೆ.
- ಶಿವಮೊಗ್ಗ ನಗರದ ಹಳೆಜೈಲು ಆವರಣದ ಸ.ನಂ.75ರಲ್ಲಿನ ಒಟ್ಟು 46.32 ಎಕರೆ ಗುಂಟೆ ಸಾರ್ವನಿಕ ಉದ್ದೇಶಕ್ಕೆ ಕಾಯ್ದಿರಿಸಿದ ಪ್ರದೇಶವನ್ನು 'ಅಲ್ಲಮ ಪ್ರಭು ಉದ್ಯಾನವನ' ಎಂದು ನಾಮಕರಣ ಮಾಡಲು ನಿರ್ಣಯ ಕೈಗೊಳ್ಳಲಾಗಿದೆ.
- ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲ್ಲೂಕನ್ನು 'ಚನ್ನಮ್ಮನ ಕಿತ್ತೂರು ತಾಲ್ಲೂಕು' ಎಂದು ಮರುನಾಮಕರಣ ಮಾಡಲು ಸಚಿವ ಸಂಪುಟ ಒಪ್ಪಿದೆ.
- ಜಲಜೀವನ್ ಮಿಷನ್ ಯೋಜನೆಯಡಿ ಮೈಸೂರು ಜಿಲ್ಲೆಯ ಹೆಚ್.ಡಿ.ಕೋಟೆಯ ಅಂತರಸಂತೆ, ಹಂಪಾಪುರ ಮತ್ತು ವಿವಿಧ ಜನವಸತಿ ಪ್ರದೇಶಗಳಿಗೆ ಹಾಗೂ ಟಿ.ನರಸೀಪುರ ತಾಲ್ಲೂಕಿನ ದೊಡ್ಡಬಾಗಿಲು, ಹಾವೇರಿ ತಾಲ್ಲೂಕಿನ ನೆಗಳೂರು, ಹಾನಗಲ್ ತಾಲ್ಲೂಕಿನ ಕುಡ್ಲ ಮತ್ತಿತರ ಜನವಸತಿ ಹಾಗೂ ಗ್ರಾಮಗಳಿಗೆ ಬಹುಗ್ರಾಮ ಕುಡಿಯುವ ನೀರು ಯೋಜನೆಯ ಪುನಶ್ಚೇತನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಯಿತು.
- ಪರಿಶಿಷ್ಟ ಜಾತಿಗಳ ವರ್ಗೀಕರಣ (ಒಳ ಮೀಸಲಾತಿ) ಗೆ ಸಂಬಂಧಿಸಿದಂತೆ ಭೋವಿ, ಬಂಜಾರ, ಕೊರಮ ಮತ್ತು ಕೊರಚ ಜಾತಿಗಳು ಹಾಗೂ ಅದರ ಪರ್ಯಾಯ ಜಾತಿಗಳು ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿದ್ದು, ಅದನ್ನು ಹಾಗೆಯೇ ಉಳಿಸಿಕೊಳ್ಳುವಂತೆ ಹಾಗೂ ಕರ್ನಾಟಕ ರಾಜ್ಯಕ್ಕೆ ಸೇರಿದ ಪರಿಶಿಷ್ಟ ಜಾತಿಗಳ ಪಟ್ಟಿಯಲ್ಲಿ ಅವುಗಳನ್ನು ಮುಂದುವರೆಸುವಂತೆ ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಸಚಿವ ಸಂಪುಟದಲ್ಲಿ ಅನುಮೋದನೆ.

### ಜ.19ರಂದು ಮಹಾಯೋಗಿ ವೇಮನ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಇದೇ ಜ.19ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ಮಹಾಯೋಗಿ ವೇಮನ ಜಯಂತಿ ಆಚರಣೆ ಸಮಾರಂಭ" ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಸಚಿವ ಹಾಗೂ ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿ ಘನಉಪಸ್ಥಿತಿವಹಿಸುವರು. ಯೋಜನಾಮತ್ತುಸಾಂಖ್ಯಿಕಸಚಿವರುಹಾಗೂಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್. ವೈ.ಗೋಪಾಲಕೃಷ್ಣ, ಪರಿಷತ್ ಸದಸ್ಯರಾದ ಡಾ.ವೈ.ನಾರಾಯಣಸ್ವಾಮಿ,ಚಿದಾನಂದಎಂ.ಗೌಡ, ನವೀನ್ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ರೆಡ್ಡಿ ಸಮಾಜದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು.

# ಉದ್ಯಮ ಕ್ಷೇತ್ರದ ಕಡೆ ಯುವ ಸಮೂಹ ಹೆಜ್ಜೆ ಹಾಕಬೇಕು: ಪಿ.ವಿ.ಅರುಣ್ ಕುಮಾರ್ ಸಲಹೆ

» ಚಿತ್ರದುರ್ಗ



ನಮ್ಮ ಪ್ರತಿ ಕೆಲಸದಲ್ಲಿ ಶ್ರದ್ದೆ ಇದ್ದರೆ ಮಾತ್ರ ನಾವು ಸಾಧನೆ ಮಾಡುವ ಮೂಲಕ ಗುರಿ ಮುಟ್ಟಬಹುದು,ಯುವ ಸಮೂಹ ಉದ್ಯಮ ಆರಂಭಿಸಲು ಸರ್ಕಾರ ಸಹಕಾರ ನೀಡುತ್ತಿದ್ದು ನವ ಉದ್ಯಮ ಕ್ಷೇತ್ರದ ಕಡೆ ಗಮನಹರಿಸಿ ಎಂದು ಅಹೋಬಲ ಟಿ.ವಿ.ಎಸ್ ಮಾಲೀಕ ಪಿ.ವಿ. ಅರುಣ್‌ಕುಮಾರ್ ತಿಳಿಸಿದರು.

ಭಾರತ ಸರ್ಕಾರ,ನೆಹರು ಯುವ ಕೇಂದ್ರ ಚಿತ್ರದುರ್ಗ ಮತ್ತು ಮದಕರಿ ಯುವಕ ಸಂಘ (ರಿ) ಚಿತ್ರದುರ್ಗ ಇವುಗಳ ಸಂಯುಕ್ತಾಶ್ರಯದಲ್ಲಿ ಬಸವೇಶ್ವರ ಟಾಕೀಸ್ ರಸ್ತೆಯ ಸಿಲಿಕಾನ್ ಇನ್ಸಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದ್ದ, ರಾಷ್ಟೀಯ ಯುವ ದಿನಾಚರಣೆ ಹಾಗೂ ಯುವ ಸಪ್ತಾಹ ಮತ್ತು ಕೌಶಲ್ಯ ಅಭೀವೃದ್ಧಿ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ದಿನಗಗಳಲ್ಲಿ ಎಲ್ಲಾರಿಗೂ ಕಂಪ್ಯೂಟರ ಜ್ಞಾನ ಅತಿ ಅಗತ್ಯವಾಗಿದೆ. ಎಲ್ಲಾ ರಂಗದಲಿ ಕಂಪ್ಯೂಟರ್ ಜ್ಞಾನ ಕಡ್ಡಾಯವಾಗಿ ಮಾಡಿದ್ದು ಅತ್ಯಾಧುನಿಕ ತಂತ್ರಜ್ಞಾನ ಕಡೆ ನಾವು ಹೆಜ್ಜೆ ಹಾಕಬೇಕು. ಸರ್ಕಾರದ ಯೋಜನೆಗಳನ್ನು ಯುವ ಸಮೂಹ ಸದ್ಬಳಕೆ ಮಾಡಿಕೊಂಡು ಸ್ವಯಂ ಉದ್ಯೋಗ ಕೈಗೊಳ್ಳಬೇಕು. ರಾಜ್ಯ ಮತ್ತು ಕೇಂದ್ರ ಸರ್ಕಾರದ ಯೋಜನೆಗಳಿಂದ ಉದ್ಯಮ ಆರಂಭಿಸಬಹುದು. ರಾಷ್ಟೀಯ ಯುವ ಸಪ್ತಾಹ ಒಂದು ವಾರಗಳ ಕಾಲ ನಡೆಯುತ್ತಿದ್ದು ಅತ್ಯಂತ ಉತ್ತಮ ಬೆಳವಣಿಗೆಯಾಗಿದ್ದು ಸ್ವಾಮಿ ವಿವೇಕಾನಂದ ಅವರು ನಮಗೆಲ್ಲ ಸ್ಫೂರ್ತಿ ಆಗಿದ್ದಾರೆ. ನಾವೆಲ್ಲರೂ ಅವರು ಹಾಕಿ ಕೊಟ್ಟ ದಾರಿಯಲ್ಲಿ ನಡೆಯೋಣ ಎಂದರು.

**ದೇಶದ ಬಗ್ಗೆ ಅಭಿಮಾನ ಅಗತ್ಯ:** ಭಾರತ ಸರ್ಕಾರದ ನೆಹರು ಯುವ ಕೇಂದ್ರದ ಜಿಲ್ಲಾ ಯವಜನ ಅಧಿಕಾರಿಗಳು ಸುಹಾಸ್ ಎನ್ ಮಾತನಾಡಿ, ವಿವೇಕಾನಂದರಂತೆ ಎಲ್ಲಾ ಯುವ ಜನತೆಯೂ ಸಹಾ ದೇಶದ ಬಗ್ಗೆ ಅಭಿಮಾನವನ್ನು ಬೆಳಸಿಕೊಳ್ಳಬೇಕಿದೆ. ವಿವೇಕಾನಂದರು ದೇಶದ ಬಗ್ಗೆ ಅಪಾರವಾದ ಕಾಳಜಿಯನ್ನು ಹೊಂದಿದ್ದರು, ಅಷ್ಟೇ ಪ್ರಮಾಣದಲ್ಲಿ ದೇಶಕ್ಕೆ ಕೊಡುಗೆಯನ್ನು ಸಹಾ ನೀಡಿದ್ದಾರೆ. ಚಲನಚಿತ್ರ ನಟರನ್ನು ಮಾದರಿಯನ್ನಾಗಿ ಇಟ್ಟುಕೊಳ್ಳುವುದಕ್ಕಿಂತ ಸ್ವಾಮಿ ವಿವೇಕಾನಂದರನ್ನು ಮಾದರಿಯನ್ನಾಗ ಇಟ್ಟುಕೊಳ್ಳಿ ಇವರ ಜನ್ಮ ದಿನದ ಅಂಗವಾಗಿ ಜ. 12 ರಿಂದ 19ರವರೆಗೆ ವಿವಿಧ ರೀತಿಯ ಕಾರ್ಯಕ್ರಮಗಳನ್ನು ನಮ್ಮ ನೆಹರು ಯುವ ಕೇಂದ್ರದಿಂದ ಹಮ್ಮಿಕೊಳ್ಳಲಾಗುತ್ತದೆ. ಇದರ ಪ್ರಯೋಜನವನ್ನು ಪಡೆಯಬೇಕಿದೆ ಎಂದರು.

ಇಂದಿನದಿನಮಾನದಲ್ಲಿಶಿಕ್ಷಣದಜೊತೆಗೆ ಯಾವುದಾದರೂಕೌಶಲ್ಯಹೊಂದಿರುವುದು ಅಗತ್ಯವಾಗಿದೆ, ಕೌಶಳ್ಯ ಇಲ್ಲದಿದ್ದರೆ ಏನು ಪ್ರಯೋಜನವಾಗುವುದಿಲ್ಲ,ನಿಮ್ಮಲ್ಲಿ ಕೌಶಲ್ಯ ಇದ್ದರೆ ಬೇರೆಯವರು ಕರೆದು ಕೆಲಸವನ್ನು ನೀಡುತ್ತಾರೆ. ನಮ್ಮಲ್ಲಿ ಲಕ್ಷಾಂತರ ಮಂದಿ ವಿದ್ಯಾವಂತರಿದ್ದಾರೆ ಆದರೆ ಕೌಶಲ್ಯವನ್ನು ಹೊಂದಿರುವವರ ಸಂಖ್ಯೆ ಕಡಿಮೆ ಇದೆ ಇದರಿಂದ ನಿರುದ್ಯೋಗ ತಾಂಡವಾಡುತ್ತಿದೆ, ಆದರೆ ಕೌಶಲ್ಯವನ್ನು ಹೊಂದಿರುವ ಯಾವ ವ್ಯಕ್ತಿಯೂ ಸಹಾ ನಿರುದ್ಯೋಗಿಯಾಗಿರುವುದಿಲ್ಲ ಆತ ಸ್ವಯಂ ಉದ್ಯೋಗಿಯಾಗಿ ಬೇರೆಯವರಿಗೆ ಕೆಲಸವನ್ನು ನೀಡುವಂತನಾಗಿರುತ್ತಾನೆ ಎಂದು ಸುಹಾಸ್ ತಿಳಿಸಿದರು.

ಕಂಪ್ಯೂಟರ್ ತರಬೇತಿದಾರರಾದ ಜಾವಿದ್ ಉಪನ್ಯಾಸ ನೀಡುತ್ತಾ, ಯುವ ಜನತೆಯಲ್ಲಿ ಇರುವ ಕೌಶಲ್ಯವನ್ನು ಹೊರ ತೆಗೆಯುವ ಕಾರ್ಯವನ್ನು ಕೇಂದ್ರ ಸರ್ಕಾರ ಕೌಶಲ್ಯ ತರಬೇತಿಯನ್ನು ನೀಡುವುದರ ಮೂಲಕ ಮಾಡುತ್ತಿದೆ. ಕೌಶಲ್ಯತೆ ನಿರುದ್ಯೋಗವನ್ನು ದೂರ ಮಾಡುತ್ತದೆ, ಬದುಕನ್ನು ರೂಪಿಸಿಕೊಂಡುತ್ತದೆ. ಯುವ ಜನತೆ ತಮ್ಮಲ್ಲಿನ ಕೌಶಲ್ಯತೆಯನ್ನು ಹೆಚ್ಚಿಗೆ ಮಾಡಿಕೊಳ್ಳಬೇಕಿದೆ, ಇದಕ್ಕಾಗಿ ಇರುವ ತರಬೇತಿಗಳನ್ನು ಪಡೆಯುವಂತೆ ಮನವಿ ಮಾಡಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಸಿಲಿಕಾನ್ ಇನ್ಸಿಟ್ಯೂಟ್ ಆಫ್ ಟೆಕ್ನಾಲಜಿಯ ಸಂಸ್ಥಾಪಕರಾದ ಡಿ ಗೋಪಾಲಸ್ವಾಮಿ ನಾಯಕ ಮಾತನಾಡಿ, ನಿಮ್ಮಲ್ಲಿನ ಕೌಶಲ್ಯವನ್ನು ಅಭೀವೃದ್ಧಿ ಪಡಿಸಿಕೊಂಡು ಕೆಲಸವನ್ನು ಪಡೆಯಿರಿ, ಇದೇ ರೀತಿ ಕೌಶಲ್ಯವನ್ನು ಕಾಲ ಕಾಲಕ್ಕೆ ತಕ್ಕಂತೆ ಅಭೀವೃದ್ದಿಯನ್ನು ಮಾಡಿಕೊಳ್ಳಬೇಕು, ಸರ್ಕಾರಿ ಕೆಲಸಕ್ಕೆ ಪ್ರಯತ್ನಿಸಿ ಸಾಧ್ಯವಾಗದಿದ್ದರೆ ನಿಮ್ಮಕೌಶಲ್ಯದಿಂದ ಸ್ವಯಂ ಆಗಿ ಕೆಲಸವನ್ನು ಪ್ರಾರಂಭ ಮಾಡಿ ಬೇರೆಯವರಿಗೆ ಕೆಲಸವನ್ನು ನೀಡಿ ಎಂದು ಕರೆ ನೀಡಿದರು.

ಮದಕರಿ ಯುವಕ ಸಂಘದ ಅಧ್ಯಕ್ಷರಾದ ಕೆಸೋಮಶೇಖರ್ ಸ್ವಾಗತಿಸಿ,ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋದನಾ ಪರಿಷತ್‌ವತಿಯಿಂದ ವೈಜ್ಞಾನಿಕ ದಿನಾಚರಣೆಯ ಅಂಗವಾಗಿ ರಾಯಚೂರು ಜಿಲ್ಲೆಯ ಲಿಂಗಸೂರುನಲ್ಲಿ ನಡೆದ ರಾಜ್ಯ ಮಟ್ಟದ 3ನೇ ವೈಜ್ಞಾನಿಕ ಸಮ್ಮೇಳನದಲ್ಲಿ ರಾಜ್ಯ ಮಟ್ಟದ ಹೆಚ್. ಎನ್.ಪ್ರಶಸ್ತಿಗೆ ಭಾಜನರಾದ ಚಿತ್ರದುರ್ಗದವರಾದ ಗಣೇಶ್‌ರವರನ್ನು ರಾಜ್ಯ ವೈಜ್ಞಾನಿಕ ಸಂಶೋದನಾ ಪರಿಷತ್ ಜಿಲ್ಲಾ ಘಟಕದಿಂದ ಗೌರವಿಸಲಾಯಿತು. ಜಿಲ್ಲಾಧ್ಯಕ್ಷರಾದ ನಾಗರಾಜ್ ಸಂಗಂ, ಕಾರ್ಯದರ್ಶಿ ಲೋಕೇಶ್, ಕೃಷ್ಣಪ್ಪ, ದೊಡ್ಡಪ್ಪ, ಮೋಹನ್, ದೇವಿಕ ರುದ್ರಪ್ಪ ಭಾಗವಹಿಸಿದ್ದರು.



ಜನವರಿ 22ರ ರಾಮಮಂದಿರದ ಪ್ರಾಣಪ್ರತಿಷ್ಠಾಕ್ಕೆ ಮುಂಚಿತವಾಗಿ ಒಂದು ವಾರದ ಪ್ರಚಾರಕ್ಕೆ ಪ್ರಧಾನಿ ನರೇಂದ್ರ ಮೋದಿಯವರ ಕರೆಯ ಮೇರೆಗೆ ದೇಶಾದ್ಯಂತ ಎಲ್ಲೆಡೆ ದೇವಸ್ಥಾನದ ಸ್ವಚ್ಚತಾ ಅಭಿಯಾನದಲ್ಲಿ ಆರಂಭವಾಗಿದ್ದು ಆಗ್ನೇಯ ಶಿಕ್ಷಕರ ಕ್ಷೇತ್ರದ ಶಾಸಕರಾದ ಡಾ:ವೈ.ಎ.ನಾರಾಯಣಸ್ವಾಮಿ ಇಂದು ಹೆಬ್ಬಾಳದ ಗಂಗಾನಗರದಲ್ಲಿ ರಾಮಭಕ್ತ ಹನುಮನ ದೇವಸ್ಥಾನಕ್ಕೆ ಭೇಟಿ ನೀಡಿ ದೇವಾಲಯದ ಆವರಣವನ್ನು ಸ್ಥಳೀಯರೊಂದಿಗೆ ಸ್ವಚ್ಚಗೊಳಿಸಿದರು.

## ಸ್ವಯಂ ಚಿಕಿತ್ಸೆ ಪಡೆಯದೆ ವೈದ್ಯರನ್ನು ಸಂಪರ್ಕಿಸಿ




» ಚಿತ್ರದುರ್ಗ

ದೇಹಕ್ಕೆ 40 ವರ್ಷ ಆದ ಮೇಲೆ ತಪಾಸಣೆಗೆ ಒಳಪಡಿಸುವುದರ ಮೂಲಕ ನಮ್ಮ ದೇಹದಲ್ಲಿ ಒಳಗಡೆ ಇರುವ ರೋಗದ ಲಕ್ಷಣಗಳನ್ನು ಪತ್ತೆ ಮಾಡಿ ಅದಕ್ಕೆ ಚಿಕಿತ್ಸೆಯನ್ನು ಪಡೆಯಲು ಅನುಕೂಲವಾಗುತ್ತದೆ ಎಂದು ಶಿವಮೊಗ್ಗದ ಸಹ್ಯಾದ್ರಿ ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಡಾ. ಅಪರ್ಣಾ ತಿಳಿಸಿದರು.

ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್. ರೋಟರಿ ಕ್ಲಬ್ ಆವರಣದಲ್ಲಿ ಇನ್ನರ್ ವೀಲ್ಡ್ ಕ್ಲಬ್ ವತಿಯಿಂದ ನಡೆದ ವಾರದ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ದೇಹದಲ್ಲಿ ಏನಾದರೂ ಏರುಪೇರಾದಾಗ ಸ್ವಯಂ ಚಿಕಿತ್ಸೆ ಪಡೆಯುವ ಬದಲು ವೈದ್ಯರನ್ನು ಭೇಟಿ ಮಾಡಬೇಕು. ವೈದ್ಯರ ಸಲಹೆಯಂತೆ ಔಷಧಿ ಪಡೆಯುವುದು ಸೂಕ್ತವಾಗಿದೆ. ದೇಹವನ್ನು ತಪಾಸಣೆ ಮಾಡುವುದರಿಂದ ಬೇರೆ ಏನಾದರೂ ತೊಂದರೆಗಳಿದ್ದರೆ ಅದು ಕೂಡ ಪತ್ತೆಯಾಗಿ ಚಿಕಿತ್ಸೆಯನ್ನು ಪಡೆಯಲು ಅನುಕೂಲವಾಗುತ್ತದೆ ಎಂದರು. ಇನ್ನರ್ ವ್ಹೀಲ್‌ಕ್ಲಬ್ ಅಧ್ಯಕ್ಷೆ ಮೋಕ್ಷಾ ರುದ್ರಸ್ವಾಮಿ, ಜಂಟಿ ಕಾರ್ಯದರ್ಶಿ ವೀಣಾ ಜಯರಾಂ, ರೋಟರಿ ಕ್ಲಬ್ ಅಧ್ಯಕ್ಷ ಕನಕರಾಜು, ಕಾರ್ಯದರ್ಶಿ ವಿಕ್ರಾಂತ್ ಜೈನ್, ಬ್ರಿಗೇಡಿಯರ್ ರವಿ ಮುನಿಸ್ವಾಮಿ, ಶ್ರೀಮತಿ ಜ್ಯೋತಿ ಲಕ್ಷ್ಮಣ ಸೇರಿದಂತೆ ಇತರರು ಭಾಗವಹಿಸಿದ್ದರು.

## ನಾಯಕನಹಟ್ಟಿ ಆರೋಗ್ಯ ಕೇಂದ್ರಕ್ಕೆ ಸೂಕ್ತ ವೈದ್ಯರನ್ನು ನೇಮಿಸಿ

» ನಾಯಕನಹಟ್ಟಿ



ಸಮುದಾಯಆರೋಗ್ಯಕೇಂದ್ರಕ್ಕೆಸೂಕ್ತವೈದ್ಯರನ್ನು ನೇಮಿಸುವಂತೆ ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ಜಿಲ್ಲಾ ನ್ಯಾಯಾಧೀಶರಾದ ಸನ್ಮಾನ್ಯ ವಿಜಯ ರವರು ತಿಳಿಸಿದರು ನಾಯಕನಹಟ್ಟಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡಿ ಆರೋಗ್ಯ ಕೇಂದ್ರದ ಒಳರೋಗಿಗಳೊಂದಿಗೆ ಮಾತನಾಡಿ ಈ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಗಳು ಸರಿಯಾದ ಚಿಕಿತ್ಸೆ ನೀಡುತ್ತಿದ್ದಾರೆಯೇ,,,,? ಈ ಆಸ್ಪತ್ರೆಯಲ್ಲಿ,ವ್ಯವಸ್ಥಿತವಾದ ಸೌಲಭ್ಯಗಳು ಸಿಗುತಿವೆಯೇ,,,,,? ಎಂದು ರೋಗಿಗಳನ್ನು ಪ್ರಶ್ನಿಸಿದರು? ಒಳ ರೋಗಿಗಳು, ಹೌದು ಸ್ವಾಮಿ, ಎಲ್ಲಾ ರೀತಿಯಿಂದಲೂ ಡಾಕ್ಟರು ನಮ್ಮನ್ನು ಚೆನ್ನಾಗಿ ನೋಡಿಕೊಳ್ಳುತ್ತಾರೆ ಮಾತ್ರ ಇಂಜೆಕ್ಷನ್, ಯಾವುದೇ ದುಡ್ಡು ಇಲ್ಲದೆ ಕೊಡುತ್ತಾರೆ. ನಮ್ಮ ಕಾಯಿಲೆ ವಾಸಿ ಆಗುತ್ತೆ ಎಂದು ಉತ್ತರಿಸಿದರು.

ಸಮುದಾಯ ಆರೋಗ್ಯ ಕೇಂದ್ರದ ವೈದ್ಯರಾದ ಡಾ.ವಿಕಾಸ್ ಮಾತನಾಡಿ

ಆರೋಗ್ಯ ಕೇಂದ್ರದಲ್ಲಿ ಮಕ್ಕಳು ತಜ್ಞರು, ಸ್ತ್ರೀರೋಗ ತಜ್ಞರು, ಹೆರಿಗೆ ತಜ್ಞರು, ಆಂಬುಲೆನ್ಸ್ ಕೊರತೆ ಇದೆ ಎಂದು ನ್ಯಾಯಾಧೀಶರಿಗೆ ಸಮಸ್ಯೆಯನ್ನು ಹೇಳಿಕೊಂಡರು.

ತಕ್ಷಣವೇ ನ್ಯಾಯಾಧೀಶರು ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ಫೋನ್ ಕರೆ ಮಾಡಿ, ಅತಿ ಶೀಘ್ರದಲ್ಲಿ ಆರೋಗ್ಯ ಕೇಂದ್ರಕ್ಕೆ ಕೊರತೆ ಇರುವ ವೈದ್ಯರನ್ನು ನೇಮಿಸುವಂತೆ ಸೂಚಿಸಿದರು.

**ಪ್ರಮುಖ ಸುದ್ದಿ**

# ನ್ಯಾಯಾಧೀಶರ ಭೇಟಿ, ಹಾಸ್ಟೆಲ್ಗಳಿಗೆ ಅಭಿವೃದ್ಧಿ ಸ್ಪರ್ಶ

» ಹೊಸದುರ್ಗ



ಪಟ್ಟಣದ ಸಮಾಜ ಕಲ್ಯಾಣ ಇಲಾಖೆ ಕಚೇರಿ ಪಕ್ಕದಲ್ಲಿರುವ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಇತ್ತೀಚೆಗೆ, ಹೊಸದುರ್ಗ ನ್ಯಾಯಾಲಯದ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಶಿವರಾಜು ಭೇಟಿ ನೀಡಿ, ಹಾಸ್ಟೆಲ್ಗಳ ಅವ್ಯವಸ್ಥೆ ಕಂಡು ಬೇಸರ ವ್ಯಕ್ತಪಡಿಸಿದ್ದರು. ನ್ಯಾಯಾಧೀಶರ ಭೇಟಿ ಹಿನ್ನೆಲೆ, ಹಾಸ್ಟೆಲ್ ಗಳಲ್ಲಿನ ಅವ್ಯವಸ್ಥೆ ಸರಿಪಡಿಸಿ, ಅಭಿವೃದ್ಧಿಯ ಸ್ಪರ್ಶ ನೀಡಿರುವುದು ಗುರುವಾರ ಕಂಡುಬಂದಿತು.

ನ್ಯಾಯಾಧೀಶರು ಹಾಸ್ಟೆಲ್ಗಳಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಅಲ್ಲಿಯ ವಿದ್ಯಾರ್ಥಿಗಳು, ಸೊಳ್ಳೆಗಳ ಕಾಟ ಬಹಳಷ್ಟಿದೆ. ಒಂದು ರೂಮಿನಲ್ಲಿ ಐದರಿಂದ ಹತ್ತು ವಿದ್ಯಾರ್ಥಿನಿಯರು ಇರುವುದರಿಂದ ಕುಳಿತುಕೊಳ್ಳಲು, ಮಲಗಲು ಬಹಳ ಸಮಸ್ಯೆಯಾಗುತ್ತಿದೆ. ಕುಳಿತು ಓದುವುದಕ್ಕೆ ವಾಚನಾಲಯ ಮತ್ತು ಗ್ರಂಥಾಲಯ ಬೇಕಿದೆ. ಸ್ನಾನ ಮಾಡಲು ಬಿಸಿ ನೀರು ಬರುವುದಿಲ್ಲ. ತಣ್ಣೀರಿನಿಂದ ಚಳಿಗಾಲದಲ್ಲಿ ಸ್ನಾನ ಮಾಡಲು ಆಗುವುದಿಲ್ಲ. ಬಹಳಷ್ಟು ಸ್ನಾನದ ಗೃಹಗಳಿಗೆ ಬಾಗಿಲುಗಳೆ ಇಲ್ಲದಾಗಿದೆ. ಕಿಟಕಿಗಳು ಸರಿಯಿಲ್ಲವೆಂದು ತಮ್ಮ ಸಮಸ್ಯೆಗಳನ್ನು ಹೇಳಿಕೊಂಡಿದ್ದರು. ಸಮಸ್ಯೆಗಳನ್ನು ಆಲಿಸಿದ ನ್ಯಾಯಾಧೀಶರು ಬೇಸರಗೊಂಡು, ನಿಮ್ಮ ಇಲಾಖೆಯ ಮುಖ್ಯಸ್ಥರೊಂದಿಗೆ ಜ.19 ರಂದು ನ್ಯಾಯಾಲಯಕ್ಕೆ ಬನ್ನಿ ಎಂದು ಮೇಲ್ವಿಚಾರಕರಿಗೆ ಸೂಚನೆ ನೀಡಿ ತೆರಳಿದ್ದರು. ನ್ಯಾಯಾಧೀಶರು ಧಿಡೀರ್ ಭೇಟಿ ನೀಡಿದ್ದರಿಂದ, ಎಚ್ಚೆತ್ತ ಇಲಾಖೆಯ ಮುಖ್ಯಸ್ಥರು ಹಾಗೂ ಹಾಸ್ಟೆಲ್ ಮೇಲ್ವಿಚಾರಕರು ಗ್ರಂಥಾಲಯ, ವಾಚನಾಲಯ, ಶೌಚಾಲಯಗಳ ಬಾಗಿಲು ಮತ್ತು ಕಿಟಕಿಗಳನ್ನು ಸರಿಪಡಿಸಿ, ಇದ್ದ ಎಲ್ಲಾ ಅವ್ಯವಸ್ಥೆಯನ್ನು ಸರಿಪಡಿಸಿ, ಹಾಸ್ಟೆಲ್ ಗೆ ಅಭಿವೃದ್ಧಿಯ ಸ್ಪರ್ಶ ನೀಡಿದ್ದಾರೆ.

> ಹಾಸ್ಟೆಲ್ ನಲ್ಲಿ ಮುಂಚೆ ಕೆಲವೊಂದು ಸಮಸ್ಯೆಗಳಿದ್ದವು. ನ್ಯಾಯಾಧೀಶರು ಇತ್ತೀಚೆಗೆ, ಧಿಡೀರ್ ಭೇಟಿ ನೀಡಿ, ಸಮಸ್ಯೆಗಳನ್ನು ಆಲಿಸಿದ್ದರು. ನ್ಯಾಯಾಧೀಶರು ಬಂದು ಹೋದ ಮೇಲೆ ಯಾವುದೇ ಸಮಸ್ಯೆಗಳಿಲ್ಲ. ಊಟದ ಚಾರ್ಟ್ ನಂತೆ ನಿತ್ಯ ಊಟ ಕೊಡಲಾಗುತ್ತದೆ. ಸೊಳ್ಳೆ ಕಾಟವನ್ನು ನಿಯಂತ್ರಿಸಲು ಎಲ್ಲಾ ರೂಮ್ ಗಳಿಗೂ ಸೊಳ್ಳೆ ಬತ್ತಿಯನ್ನು ಕೊಟ್ಟಿದ್ದಾರೆ. ಬಾಳೆಹಣ್ಣು, ಮೊಟ್ಟೆಯನ್ನು ಸರಿಯಾಗಿ ಕೊಡಲಾಗುತ್ತಿದೆ.
>
> » ಪದ್ಮಾವತಿ. ಹಾಸ್ಟೆಲ್ ವಿದ್ಯಾರ್ಥಿನಿ.

> ಹಾಸ್ಟೆಲ್ ನಲ್ಲಿ ನಿಗದಿಗಿಂತ ಹೆಚ್ಚು ವಿದ್ಯಾರ್ಥಿನಿಯರಿದ್ದಾರೆ. ಹಾಗಾಗಿ, ಸಮಸ್ಯೆಗಳಾಗುತ್ತಿವೆ ಅಷ್ಟೇ. ಇನ್ನೊಂದು ಹಾಸ್ಟೆಲ್ ಕಟ್ಟಡ ನಿರ್ಮಾಣವಾದರೆ, ಯಾವುದೇ ಸಮಸ್ಯೆ ಇರುವುದಿಲ್ಲ. ಮುಂಚೆ ಸಣ್ಣ ಪುಟ್ಟ ಸಮಸ್ಯೆಗಳಿದ್ದವು. ಈಗ ಎಲ್ಲವು ಸರಿಯಾಗಿದೆ. ಚಾರ್ಟ್ ನಂತೆ ತಿಂಡಿ, ಊಟ ಕೊಡುತ್ತಿದ್ದಾರೆ.
>
> » ಲಾವಣ್ಯ. ಹಾಸ್ಟೆಲ್ ವಿದ್ಯಾರ್ಥಿನಿ.

> ನಮಗೆ (ಮೇಲ್ವಿಚಾರಕರಿಗೆ) ಇಲಾಖೆಯಿಂದ ಅಭಿವೃದ್ಧಿಗೆ ಕಡಿಮೆ ಹಣ ಬರುತ್ತದೆ. ಹೆಚ್ಚು ಹಣಬೇಕಾದರೆ, ಮೇಲಾಧಿಕಾರಿಗಳ ಗಮನಕ್ಕೆ ತರಬೇಕು. ಇತ್ತೀಚೆಗೆ, ನ್ಯಾಯಾಧೀಶರು ಹಾಸ್ಟೆಲ್ಗಳಿಗೆ ಭೇಟಿ ನೀಡಿ ಸಮಸ್ಯೆಯನ್ನು ಸರಿಪಡಿಸಿಕೊಳ್ಳುವಂತೆ ಸೂಚನೆ ನೀಡಿದ್ದರು. ಇದನ್ನು ಮೇಲಾಧಿಕಾರಿಗಳ ಗಮನಕ್ಕೆ ತಂದು, ಅವರ ಮಾರ್ಗದರ್ಶನದಂತೆ ಎಲ್ಲಾ ಸಮಸ್ಯೆಗಳನ್ನು ಸರಿಪಡಿಸಲಾಗಿದೆ. ಹಾಸ್ಟೆಲ್ ನಲ್ಲಿ ಇದೀಗ, ಯಾವುದೇ ಸಮಸ್ಯೆಗಳಿಲ್ಲ.
>
> » ವಿಜಯಲಕ್ಷ್ಮಿ, ಮೇಲ್ವಿಚಾರಕರು. ವಿದ್ಯಾರ್ಥಿ ನಿಲಯ

# ಆರ್ಥಿಕ ಸಬಲತೆ ಸಾಧಿಸಿ: ಜಿಲ್ಲಾ ನ್ಯಾ. ಕೆ.ಬಿ.ಗೀತಾ

» ಚಿತ್ರದುರ್ಗ

ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆಯ ಬಲ ಇದ್ದರೂ, ಮಹಿಳೆಯ ಮೇಲಿನ ಹಿಂಸೆ ಪ್ರಕರಣಗಳು ಕಡಿಮೆಯಾಗಿಲ್ಲ. ಹಿಂಸೆ ಅನುಭವಿಸಿದರೂ ಮಹಿಳೆಯರು ದೂರು ನೀಡಲು ಹಿಂದೇಟು ಹಾಕುತ್ತಾರೆ. ಇದಕ್ಕೆ ಮುಖ್ಯ ಕಾರಣ ಮಹಿಳೆಯರು ಆರ್ಥಿಕವಾಗಿ ಸಬಲರಾಗಿಲ್ಲ. ಆರ್ಥಿಕವಾಗಿ ಮಹಿಳೆಯರು ಸಬಲವಾದಂತೆ ಅವರ ಮೇಲಿನ ಹಿಂಸೆಯ ಪ್ರಮಾಣವೂ ಸಹ ಕಡಿಮೆಯಾಗುತ್ತವೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಕೆ.ಬಿ.ಗೀತಾ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಅನುಷ್ಠಾನದಲ್ಲಿ ಭಾಗೀದಾರ ಇಲಾಖೆಗಳ ಪಾತ್ರದ ಬಗ್ಗೆ ಎರಡು ದಿನಗಳ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೌಟುಂಬಿಕ ಹಿಂಸೆಗೆ ಒಳಗಾದ ಮಹಿಳೆ ಐಪಿಸಿ ಕಾಯ್ದೆಯಡಿ ದೂರು ದಾಖಲಿಸಿದರೆ ಅವರನ್ನು ಕುಟುಂಬದಿಂದ ಹೊರ ಇರುವಂತೆ ತಿಳಿಸಲಾಗುತ್ತಿತ್ತು. ಆದರೆ ಕೌಟುಂಬಿಕ ಹಿಂಸೆಯಿಂದ ಮಹಿಳೆಯ ಸಂರಕ್ಷಣಾ ಕಾಯ್ದೆಯಲ್ಲಿ ದೂರುದಾರ ಮಹಿಳೆ ಅದೇ ಕುಟುಂಬದೊಂದಿಗೆ



ವಾಸವಿದ್ದು ರಕ್ಷಣೆ ಕೋರಬಹುದು. ಮನೆಯ ಇತರೆ ಸದಸ್ಯರು ಮಹಿಳೆಗೆ ಹಿಂಸೆ ನೀಡದಂತೆ ಕಾಯ್ದೆಯ ಅನುಸಾರ ನಿಯಂತ್ರಿಸಲು ಅವಕಾಶವಿದೆ ಎಂದರು. ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಸಂರಕ್ಷಣಾಧಿಕಾರಿಗಳು ಕೌಟುಂಬಿಕ ಹಿಂಸೆಯ ಪ್ರಕರಣಗಳನ್ನು ಹತ್ತಿರದಿಂದ ನೋಡಿರುತ್ತಿರಿ. ಇಂತಹ ಸಂದರ್ಭದಲ್ಲಿ ಅತ್ಯಂತ ಸೂಕ್ಷ್ಮವಾಗಿ ಪ್ರಕರಣಗಳನ್ನು ನಿರ್ವಹಿಸಬೇಕು. ಅಂತಃಕರಣದಿಂದ ಕಾರ್ಯನಿರ್ವಹಿಸಿ ನೊಂದವರಿಗೆ ಸಹಾಯ ಮಾಡಬೇಕು. ಸಂಬಂಧಪಟ್ಟವರ ವಿರುದ್ಧ ದೂರು ದಾಖಲಿಸಬೇಕು. ಇದರ ಆಧಾರದಲ್ಲಿ ನ್ಯಾಯಾಲಯಗಳು ನೊಂದವರಿಗೆ ರಕ್ಷಣೆ ನೀಡಿ ಪರಿಹಾರ ಒದಗಿಸುತ್ತವೆ. ಬೇರೆಲ್ಲಾ ಕಾನೂನುಗಳಲ್ಲಿ ಇರುವ ಅಧಿಕಾರವನ್ನು ಮಹಿಳೆಯರ ಸಂರಕ್ಷಣಾ ಕಾಯ್ದೆಯಲ್ಲಿ ಒಗ್ಗೂಡಿಸಿ ನ್ಯಾಯಾಧೀಶರಿಗೆ ನೀಡಲಾಗಿದೆ. ಇದರಿಂದಾಗಿ ನ್ಯಾಯಾಧೀಶರು ಯುಕ್ತವಾಗಿ ನೊಂದವರಿಗೆ ನ್ಯಾಯ ನೀಡಬಹುದು ಎಂದರು.ಮಹಿಳೆಯರ ಮೇಲಿನ ದೈಹಿಕ ಹಲ್ಲೆ, ನಿಂದನೆ, ಮಾನಸಿಕ, ಭಾವನಾತ್ಮಕ ಹಾಗೂ ಲೈಂಗಿಕ ಹಿಂಸೆಗಳು ಕೌಟುಂಬಿಕ ಹಿಂಸೆಗಳ ಪರಿಧಿಗೆ ಬರುತ್ತವೆ.

ಇದರೊಂದಿಗೆ ವರದಕ್ಷಿಣೆ ಕಿರುಕುಳವು ಭಾರತದಲ್ಲಿ ಕೌಟುಂಬಿಕೆ ಹಿಂಸೆಗೆ ಪ್ರಮುಖ ಕಾರಣ. ವರದಕ್ಷಿಣೆ ಸಮಾಜದಲ್ಲಿ ಆಳವಾಗಿ ಬೇರು ಬಿಟ್ಟಿದೆ. ಇದನ್ನು ಬುಡ ಸಮೇತ ಕಿತ್ತು ಹಾಕಬೇಕು. ಮಹಿಳೆ ಹಾಗೂ ಚಿಕ್ಕ ಮಕ್ಕಳಿಗೆ ಯಾವುದೇ ರೀತಿಯ ಕಿರುಕುಳ ನೀಡಿದರೆ ಅದು ಕೌಟುಂಬಿಕ ಹಿಂಸೆ ಅನಿಸಿಕೊಳ್ಳುತ್ತದೆ ಎಂದು ತಿಳಿಸಿದರು.

ಎರಡನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಬಾಲನ್ಯಾಯ ಮಂಡಳಿ ಅಧ್ಯಕ್ಷೆ ಉಜ್ವಲ ವೀರಣ್ಣ ಸಿದ್ದಣ್ಣನವರ್ ಮಾತನಾಡಿ, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆಯ ಅನುಷ್ಠಾನದಲ್ಲಿ ಸಂರಕ್ಷಣಾಧಿಕಾರಿಗಳು ನೊಂದ ಮಹಿಳೆಯರನ್ನು ಅನುಕಂಪದಿಂದ ನೋಡಬೇಕು.

ಪ್ರತಿಯೊಂದು ಪ್ರಕರಣ ದಲ್ಲೂ ಸೂಕ್ಷ್ಮತೆಯನ್ನು ಅರ್ಥಮಾಡಿಕೊಳ್ಳಬೇಕು. ಕೌಟುಂಬಿಕ ಹಿಂಸೆ ಹೆಚ್ಚಾಗಲು ಸಮಾಜದ ಮನಸ್ಥಿತಿಯೇ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದರು. ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ ಮಾತನಾಡಿ, ಯಾವ ಮನೆಯಲ್ಲಿ ಹೆಣ್ಣಿಗೆ ಗೌರವ ಇರುತ್ತದೆಯೋ ಆ ಮನೆ ನಂದಗೋಕುಲವಾಗಿರುತ್ತದೆ. ಸಮಸ್ಯೆಗಳು ಕೂಡ ಕಡಿಮೆ ಇರುತ್ತವೆ. ಯಾವ ಮನೆಯಲ್ಲಿ ಹೆಣ್ಣಿಗೆ ಗೌರವ ಇರುವುದಿಲ್ಲಯೋ ಆ ಮನೆ ನರಕವಾಗಿರುತ್ತದೆ. ಸಮಸ್ಯೆಗಳೂ ಹೆಚ್ಚಾಗಿರುತ್ತವೆ. ಸುಶಿಕ್ಷಿತ ಸಮಾಜದಲ್ಲಿ ಕೌಟುಂಬಿಕ ಹಿಂಸೆಯ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿರುವುದು ಬಹಳ ಕಳವಳಕಾರಿ ಸಂಗತಿಯಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿಗಳಾದ ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಸುಧಾದೇವಿ ಅವರು, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆಯ ಸ್ವರೂಪ, ಕಾಯ್ದೆಯ ಅನುಷ್ಠಾನಕ್ಕಾಗಿ ಕೈಗೊಂಡಿರುವ ಕಾರ್ಯಕ್ರಮಗಳು, ಲಿಂಗತಾರತಮ್ಯ, ದೌರ್ಜನ್ಯಎದುರಿಸುತ್ತಿರುವಮಹಿಳೆಯರಿಗೆ ಸಮಾಲೋಚನೆ ಮತ್ತು ಪರಿಣಾಮಗಳ ಕುರಿತು ಉಪನ್ಯಾಸ ನೀಡಿದರು.

ಬಾಲನ್ಯಾಯ ಮಂಡಳಿ ಸದಸ್ಯೆ ಸುಮನ ಎಸ್.ಅಂಗಡಿ ಅವರು ಭಾರತ ಸಂವಿಧಾನದಲ್ಲಿ ಮಹಿಳೆಯರು ಮತ್ತು ಮಕ್ಕಳ ಹಕ್ಕುಗಳ ಪರಿಚಯ, ಮಹಿಳೆಯರ ವಿರುದ್ಧ, ದೌರ್ಜನ್ಯ ತಡೆಗಟ್ಟಲು ಜಾರಿಯಲ್ಲಿರುವ ಕಾಯ್ದೆ ಮತ್ತು ನಿಯಮದ ಬಗ್ಗೆ ಅರಿವು ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ನಿರೂಪಣಾಧಿಕಾರಿ ಎಸ್.ವಿಜಯಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಎನ್.ಪವಿತ್ರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತಾ ಸೇರಿದಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮೇಲ್ವಿಚಾರಕರು, ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ವಕೀಲರು ಹಾಗೂ ಕಾನೂನು ಪದವಿ ವಿದ್ಯಾರ್ಥಿಗಳು ಇದ್ದರು.



ಇಂದು ಚಿತ್ರದುರ್ಗದ ಜಿಲ್ಲಾಧಿಕಾರಿಯವರಾದ ಶ್ರೀ ಮತಿ ದಿವ್ಯಪ್ರಭು ಮೇಡಂ ರವರಿಗೆ ಅಯೋಧ್ಯೆ ರಾಮ ಮಂದಿರದ ಮಂತ್ರಾಕ್ಷತೆ ವಿತರಣೆ ಮಾಡಲಾಯಿತು. ಈ ಸಂಧರ್ಭದಲ್ಲಿ ಬಿಜೆಪಿ ಯುವ ಮುಖಂಡರಾದ ಅನಿತ್ ಕುಮಾರ್ ಜಿ.ಎಸ್. ಸಂಘದ ಪ್ರಮುಖರಾದ ದೇವರಾಜ್ ಕೋಟ್ಲಾ ,ವಿಶ್ವ ಹಿಂದೂ ಪರಿಷತ್ ನ ರುದ್ರೇಶ್ ಹಾಗೂ ಎಸ್ ಆರ್.ಲೆಪಾಕ್ಷಾ ,ಶರಣ್ ಉಪಸ್ಥಿತರಿದ್ದರು.



ಹಿರಿಯೂರು ತಾಲೂಕಿನ ಗೌನ ಹಳ್ಳಿ ಹಿರಿಯ ಸರ್ಕಾರಿ ಪ್ರಾಥಮಿಕ ಶಾಲೆಗೆ ಪ್ರತಿದಿನ 2 ಕೆ.ಮೀ ನಡೆದುಕೊಂಡು ಬರುತ್ತಿದ್ದ ವಿದ್ಯಾರ್ಥಿನಿ ಗೆ ಇನ್ನರ್ವೀಲ್ ಕ್ಲಬ್ ವತಿಯಿಂದ ಸೈಕಲ್ ನೀಡಿದರು ಈ ಸಂದರ್ಭದಲ್ಲಿ ಅಧ್ಯಕ್ಷರಾದ ಲಕ್ಷ್ಮಿ ರಾಜೇಶ್ ಎಡಿಟರ್ ಸೌಮ್ಯ ಪ್ರಶಾಂತ್ ಐಎ□□□ ರಚನಾ ಅನಂತ್, ಮತ್ತಿತರರು ಉಪಸ್ಥಿತರಿದ್ದರು

## ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಪಂಪ್, ಮೋಟಾರ್ ವಿತರಣೆ



» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ವಾಲ್ಮೀಕಿ ಸಮುದಾಯದ ರೈತರಿಗೆ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ವತಿಯಿಂದ್ ಗಂಗಾಕಲ್ಯಾಣ ಯೋಜನೆಯಡಿ ಆಯ್ಕೆಯಾದ ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಪಂಪ್‌ಮೋಟರ್ ವಿತರಣೆ ಮಾಡುತ್ತಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳುವಲ್ಲಿ ಪರಿಶಿಷ್ಟ ಪಂಗಡದ ರೈತರು ಮುಂದಾಗಬೇಕೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ಗುರುವಾರ ಶಾಸಕರ ಭವನದ ಆವರಣದಲ್ಲಿ ಮಹರ್ಷಿ ಶ್ರೀವಾಲ್ಮೀಕಿ ಅಭಿವೃದ್ಧಿ ನಿಗಮದ ವತಿಯಿಂದ 2018-19ನೇ ಸಾಲಿನಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಪಂಪ್, ಮೋಟಾರ್ ವಿತರಿಸಿ ಮಾತನಾಡಿದರು. ನಿಗಮದ ಅಭಿವೃದ್ಧಿ ಅಧಿಕಾರಿ ಮೊಹಮ್ಮದ್ ಉಸ್ಮಾನ್, ಕಚೇರಿ ಅಧೀಕ್ಷಕ ಹೊನ್ನೂರುಸ್ವಾಮಿ, ಕಾಂಗ್ರೆಸ್ ಮುಖಂಡರಾದ ಮಂಜಣ್ಣ, ದರ್ಶನ್, ಬಡಗಿಪಾಪಣ್ಣ, ಮಲ್ಲಿಕಾರ್ಜುನ್, ನಾಗರಾಜು, ಎಂ.ಚೇತನ್‌ಕುಮಾರ್, ಜಿ.ಕೆ.ಗುಜ್ಜಾರಪ್ಪ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಯಜ್ಞ ವಲ್ಕ್ಯಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಬಹುಮಾನಗಳು

» ಹಿರಿಯೂರು

ಹಿರಿಯೂರಿನ ನ್ಯೂ ಡೈಮಂಡ್ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘ ಇವರ ಆಶ್ರಯದಲ್ಲಿ ತಾಲ್ಲೂಕು ಮಟ್ಟದ ಕ್ರೀಡಾಕೂಟವನ್ನು ಆಯೋಜಿಸಲಾಗಿತ್ತು. ಈ ಕ್ರೀಡಾಕೂಟದಲ್ಲಿ ಯಾಜ್ಞವಲ್ಕ್ಯ ಪಬ್ಲಿಕ್ ಸ್ಕೂಲ್ ಸಿಬಿಎ□□□ ಭೀಮನಬಂಡೆ ವಿದ್ಯಾರ್ಥಿಗಳೂ ಸಹ ಭಾಗವಹಿಸಿ ಈ ಕೆಳಕಂಡ ವಿಭಾಗಗಳಲ್ಲಿ ಜಯಶೀಲರಾಗಿರುತ್ತಾರೆ. ಬಾಲಕರ ಪ್ರೌಢಶಾಲಾ ವಿಭಾಗ ಖೋ-ಖೋ ಪ್ರಥಮ ಸ್ಥಾನ

**ಬಾಲಕಿಯರ ಪ್ರೌಢಶಾಲಾ ವಿಭಾಗ ಖೋ-ಖೋ ಪ್ರಥಮ ಸ್ಥಾನ**

**ಹಿರಿಯ ಬಾಲಕರ ವಿಭಾಗ ಖೋ-ಖೋ ದ್ವಿತೀಯ ಸ್ಥಾನ**

**ಹಿರಿಯ ಬಾಲಕಿಯರ ವಿಭಾಗ ಖೋ-ಖೋ ದ್ವಿತೀಯ ಸ್ಥಾನ ಪಡೆದಿರುತ್ತಾರೆ.**

**ಅಥ್ಲೇಟಿಕ್ಸ್ ವಿಭಾಗದಲ್ಲಿ:**

**1. ಹಿರಿಯ ಬಾಲಕರ ವಿಭಾಗ**
**100 ಮೀ. ಪ್ರಥಮ ಫರ್ಹಾನ್**
**200 ಮೀ. ಪ್ರಥಮ ಸ್ಥಾನ ಧ್ರುವ**
**200 ಮೀ ದ್ವಿತೀಯ ಸ್ಥಾನ ಫರ್ಹಾನ್**
**ರಿಲೇ ದ್ವಿತೀಯ ಸ್ಥಾನ**

**2. ಹಿರಿಯ ಬಾಲಕಿಯರ ವಿಭಾಗ**
**200 ಮೀ. ಓಟ ಪ್ರಥಮ ಸ್ಥಾನ ಅಕ್ಷತಾ**
**ರಿಲೇ ದ್ವಿತೀಯ ಸ್ಥಾನ**

**3. ಪ್ರೌಢಶಾಲಾ ಬಾಲಕರ ವಿಭಾಗ**
**3000 ಮೀ. ಓಟ ಪ್ರಥಮ ಸ್ಥಾನ ಮಧುಸೂದನ**
**1500 ಮೀ. ಓಟ ಪ್ರಥಮ ಸ್ಥಾನ ಸುಹಾಸ್ ಮತ್ತು ದ್ವಿತೀಯ ಸ್ಥಾನ ರಂಜಿತ್**
**200 ಮೀ. ಓಟ ದ್ವಿತೀಯ ಸ್ಥಾನ ಶಿವಪ್ರಸಾದ್**
**100 ಮೀ. ಓಟ ತೃತೀಯ ಸ್ಥಾನ ಶಿವಪ್ರಸಾದ್ ಪಡೆದಿರುತ್ತಾರೆ**
**ರಿಲೇ ದ್ವಿತೀಯ ಸ್ಥಾನ**



**ಪ್ರೌಢಶಾಲಾ ಬಾಲಕಿಯರ ವಿಭಾಗ**
**100 & 200 ಮೀ. ಓಟ ತೃತೀಯ ಸ್ಥಾನ ಅರ್ಚಿತ, 1500 ಮೀ. ಓಟ ತೃತೀಯ ಸ್ಥಾನ**
**ರಿಲೇ ದ್ವಿತೀಯ ಸ್ಥಾನ**

ಈ ಮೇಲಿನ ಎಲ್ಲಾ ವಿಭಾಗಗಳಲ್ಲಿ ಜಯಶೀಲರಾಗಿ ಶಾಲೆಗೆ ಕೀರ್ತಿಯನ್ನು ತಂದಿರುತ್ತಾರೆ.

ಗೆದ್ದಂತಹ ಕ್ರೀಡಾಪಟುಗಳಿಗೆ ಶಾಲೆಯ ಛೇರ್ಮನ್ ಟಿ ಸುರೇಶ್ , ಉಪ ಛೇರ್ಮನ್ ಡಾ.ರಾಧಿಕಾ, ಶ್ರೀನಿವಾಸ್ , ಪ್ರಾಂಶುಪಾಲರಾದ ಶ್ರೀಶಾನ್ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರಾದ ಮಂಜುನಾಥ್ ಹಾಗೂ ಹರ್ಷ ಒಳಗೊಂಡಂತೆ ಶಾಲೆಯ ಎಲ್ಲಾ ಶಿಕ್ಷಕರು ಅಭಿನಂದಿಸಿರುತ್ತಾರೆ.

## ಅರೆ ನೀರಾವರಿ ಬೆಳೆ ಬೆಳೆಯಲು ಸಲಹೆ

ದಾವಣಗೆರೆ: ಕರ್ನಾಟಕ ನೀರಾವರಿ ನಿಗಮದ ಭದ್ರಾ ನಾಲಾ ದಾವಣಗೆರೆ ವ್ಯಾಪ್ತಿಗೆ ಒಳಪಡುವ ರೈತರು ಬೇಸಿಗೆ ಹಂಗಾಮಿನಲ್ಲಿ ತೋಟವನ್ನು ಹೊರತುಪಡಿಸಿ ಇತರೆ ಬೆಳೆ ಬೆಳೆಯದಂತೆ ಸಲಹೆ ನೀಡಲಾಗಿದೆ.

ಪ್ರಸ್ತುತ ಭದ್ರಾ ಜಲಾಶಯದಲ್ಲಿ ಲಭ್ಯವಿರುವ ನೀರಿನ ಪ್ರಮಾಣವನ್ನು ಗಣನೆಗೆ ತೆಗೆದುಕೊಂಡು ಜಲಾಶಯದ ಎಡದಂಡೆ ಮತ್ತು ಬಲದಂಡೆ ನಾಲೆಗಳಿಗೆ 2023-24 ನೇ ಸಾಲಿನ ಬೇಸಿಗೆ ಹಂಗಾಮಿನ ಬೆಳೆಗಳಿಗೆ ಭದ್ರಜಲಾಶಯದಿಂದ ನೀರನ್ನು ಹರಿಸಲಾಗುವುದು. ಈಗಾಗಲೇ ಬಲದಂಡೆ ಕಾಲುವೆಗೆ ಜನವರಿ 15 ರಿಂದ ನೀರನ್ನು ಹರಿಸಲಾಗಿದೆ.

ಬೆಳೆದು ನಿಂತಿರುವ ಬೆಳೆಗಳಿಗೆ ಮತ್ತು ಜನ ಜಾನುವಾರುಗಳಿಗೆ ಕುಡಿಯಲು ಹಾಗೂ ಬೆಳೆದು ನಿಂತ ತೋಟಗಳಿಗೆ ಮಾತ್ರ ನೀರನ್ನು ಹರಿಸಲಾಗುವುದು.

## ಫಾಸ್ಟ್ ನ್ಯೂಸ್

### ಜ.21ರಂದು ಅಂಬಿಗರ ಚೌಡಯ್ಯ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಇದೇ ಜ.21ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ನಿಜಶರಣ ಅಂಬಿಗರ ಚೌಡಯ್ಯ ಜಯಂತಿ ಆಚರಣೆ ಸಮಾರಂಭ" ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ಸಚಿವ ಹಾಗೂ ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿ ಘನಉಪಸ್ಥಿತಿವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಕಾರ್ಯಕ್ರಮ ಉಧ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ ಭಾಗವಹಿಸುವರು.ಮುಖ್ಯಅತಿಥಿಗಳಾಗಿಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ. ಚಂದ್ರಪ್ಪ, ಎನ್.ವೈ.ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಜಿಲ್ಲಾ ಗಂಗಾಬಿಕಾ ಬೆಸ್ತರ ಸಂಘದ ಅಧ್ಯಕ್ಷ ಹೆಚ್.ಡಿ. ರಂಗಯ್ಯ, ಕಾರ್ಯದರ್ಶಿ ಪಿ. ಶ್ರೀನಿವಾಸ್ ಸೇರಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಗಂಗಾಂಭಿಕಾ ಬೆಸ್ತರ ಸಮಾಜದ ಮುಖಂಡರು, ಗಣ್ಯರು ಭಾಗವಹಿಸಲಿದ್ದಾರೆ. ಚಿತ್ರದುರ್ಗದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಡಾ. ಬಿ.ಎಂ. ಗುರುನಾಥ ಉಪನ್ಯಾಸ ನೀಡುವರು. ಮೊಳಕಾಲ್ಮುರು ತಾಲ್ಲೂಕು ಹಿರೇಕೆರೆಹಳ್ಳಿಯ ಲೋಕೇಶ್ ಪಲ್ಲವಿ ಅವರಿಂದ ಗೀತಗಾಯನ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಮಾಜಿ ಸೈನಿಕ ದೃಢೀಕರಣ ಪಡೆಯಲು ಕೋರಿಕೆ

» ಚಿತ್ರದುರ್ಗ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಮಾಜಿ ಸೈನಿಕರ ಮಕ್ಕಳ ವೃತ್ತಿ ವೃತ್ತಿಪರ ಶಿಕ್ಷಣಗಳ ದಾಖಲಾತಿಗಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಅರ್ಜಿ ಕರೆಯಲಾಗಿದ್ದು, 2024ನೇ ಸಾಲಿನಿಂದ ಮಾಜಿ ಸೈನಿಕ ಖೋಟಾದಡಿಯಲ್ಲಿ ಅರ್ಜಿ ಸಲ್ಲಿಸಲು ಮಾಜಿ ಸೈನಿಕ ದೃಢೀಕರಣ ಪತ್ರವನ್ನು ಅರ್ಜಿಯೊಂದಿಗೆ ಮುಂಗಡವಾಗಿಯೇ ಸಲ್ಲಿಸಬೇಕಾಗಿರುವುದರಿಂದ ಅವಶ್ಯಕ ದಾಖಲೆಗಳೊಂದಿಗೆ ಸೇವಾ ಸಿಂಧು ಜಾಲತಾಣದಲ್ಲಿ ಅರ್ಜಿ ಸಲ್ಲಿಸಿ ಪಡೆದುಕೊಳ್ಳಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ದೂರವಾಣಿ ಸಂಖ್ಯೆ 08182-220925 ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಕ ಡಾ. ಸಿ.ಎ.ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗಾಯಗೊಂಡ ಕೃಷ್ಣಮೃಗಕ್ಕೆ ಚಿಕಿತ್ಸೆ ನೀಡಿ ಅರಣ್ಯಕ್ಕೆ ಬಿಟ್ಟ ಅಧಿಕಾರಿಗಳು



» ಚಳ್ಳಕೆರೆ

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದಲ್ಲಿ ಆಕಸ್ಮಿಕವಾಗಿ ಗ್ರಾಮ ಪ್ರವೇಶಿಸಿದ ಕೃಷ್ಣಮೃಗವನ್ನು ಕೆಲವು ನಾಯಿಗಳು ಬೆನ್ನತ್ತಿ ದಾಳಿ ನಡೆಸಿದ್ದು, ಕೃಷ್ಣಮೃಗ ಕಾಲುಗಳಿಗೆ ಗಾಯವಾಗಿ ಕೃಷ್ಣಮೃಗ ಅಸ್ವಸ್ಥಗೊಂಡಿತ್ತು. ಗ್ರಾಮಸ್ಥರು ನಾಯಿಗಳನ್ನು ಓಡಿಸಿ ನಂತರ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದ ಕೂಡಲೇ ಅರಣ್ಯ ವಲಯ ಅಧಿಕಾರಿ ಬಹುಗುಣ ಮತ್ತು ಸಿಬ್ಬಂದಿ ವರ್ಗ ಗ್ರಾಮಕ್ಕೆ ತೆರಳಿ ಕೃಷ್ಣಮೃಗವನ್ನು ಪಶುವೈದ್ಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದ ನಂತರ ಕೃಷ್ಣಮೃಗ ಚೇತರಿಸಿಕೊಂಡಿತು ಕೂಡಲೇ ಅದನ್ನು ವರವು ಕಾವಲಿನಲ್ಲಿ ಬಿಡಲಾಯಿತು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

### ಮಕ್ಕಳ ಪಾಲನಾ ಸಂಸ್ಥೆ ನೊಂದಣಿ ಕಡ್ಡಾಯ

» ದಾವಣಗೆರೆ

ಜಿಲ್ಲಾ ಮಟ್ಟದ ವ್ಯಾಪ್ತಿಯಲ್ಲಿ ಬರುವ ಮಕ್ಕಳ ಪಾಲನ ಸಂಸ್ಥೆಗಳು ಕಡ್ಡಾಯವಾಗಿ ಬಾಲನ್ಯಾಯ ಕಾಯ್ದೆಯಡಿ ನೋಂದಣಿ ಮಾಡಿಕೊಳ್ಳಬೇಕು. ಹಾಗೂ ನೋಂದಣಿಯಾದ ಸಂಸ್ಥೆಗಳು ಪ್ರತಿ ಐದು ವರ್ಷಕ್ಕೊಮ್ಮೆ ನವೀಕರಣ ಮಾಡಿಸಿಕೊಳ್ಳಬೇಕು. ನೊಂದಣಿಯಾಗದೆ ಇರುವ ಸಂಸ್ಥೆಗಳನ್ನು ಕಡ್ಡಾಯವಾಗಿ ನೊಂದಣಿ ಮಾಡಿಸುವ ಸಲುವಾಗಿ ತಮ್ಮ ತಾಲ್ಲೂಕುಗಳಿಗೆ ವಿಶೇಷ ಕಾರ್ಯಚರಣೆ ಮಾಡಿ ನೊಂದಣಿ ಮಾಡಿಸಬೇಕು. ನೊಂದಣಿಯಾಗದ ಸಂಸ್ಥೆಗಳ ವಿರುದ್ದ ಕ್ರಮ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9632962676,9844198275 ಸಂಪರ್ಕಿಸಲು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಬಿಸಿಯೂಟ ಕಾರ್ಯಕರ್ತರ ಸಮಸ್ಯೆ ನಿವಾರಣೆಯ ಬಗ್ಗೆ ಸದನದಲ್ಲಿ ಧ್ವನಿಎತ್ತಿ

# ಶಾಸಕ ರಘುಮೂರ್ತಿಗೆ ಎಐಟಿಯುಸಿ ಸಂಘಟನೆ ಮನವಿ

» ಚಳ್ಳಕೆರೆ

ರಾಜ್ಯದಾದ್ಯಂತ ಸುಮಾರು 1.18 ಲಕ್ಷ ಬಿಸಿಯೂಟ ತಯಾರಿಕ ಮಹಿಳೆಯರು ಅಡುಗೆ ಕಾರ್ಯನಿರ್ವಹಿಸುತ್ತಿದ್ದು, ಅವರಿಗೆ ರಾಜ್ಯ ಸರ್ಕಾರದಿಂದ ಎಲ್ಲಾ ರೀತಿಯ ಮೂಲಭೂತ ಸೌಕರ್ಯ ಒದಗಿಸಬೇಕು, ಸೇವಾಭದ್ರತೆ ನೀಡುವ ಈ ಬಗ್ಗೆ ಮುಂಬರುವ ವಿಧಾನಸಭಾ ಅಧಿವೇಶನದಲ್ಲಿ ಬಿಸಿಯೂಟ ತಯಾರಿಕ ಮಹಿಳೆಯರ ಪರವಾಗಿ ಧ್ವನಿ ಎತ್ತಬೇಕೆಂದು ಎಐಟಿಯುಸಿ ಅಧ್ಯಕ್ಷ ಸಿ.ವೈ.ಶಿವರುದ್ರಪ್ಪ ಶಾಸಕ ಟಿ.ರಘುಮೂರ್ತಿಯವರನ್ನು ಮನವಿ ಮೂಲಕ ಒತ್ತಾಯಿಸಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತ್ರೈಮಾಸಿಕ ಸಭೆಯ ಸಂದರ್ಭದಲ್ಲಿ ನೂರಾರು ಬಿಸಿಯೂಟ ಕಾರ್ಯಕರ್ತರೊಂದಿಗೆ ಆಗಮಿಸಿದ ಅವರು, ಕಳೆದ ಹಲವಾರು ವರ್ಷಗಳಿಂದ ಬಿಸಿಯೂಟ ಕಾರ್ಯಕರ್ತರು ತಮ್ಮ ಮೂಲಭೂತ ಸಮಸ್ಯೆಗಳ ಈಡೇರಿಕೆಗಾಗಿ ಸರ್ಕಾರವನ್ನು ಒತ್ತಾಯಿಸುತ್ತಾ ಬಂದಿದ್ಧಾರೆ. ಆದರೆ, ಯಾವುದೇ ರೀತಿಯ



ಪ್ರಯೋಜನವಾಗಿಲ್ಲ. ಕಳೆದ ಸುಮಾರು 30 ವರ್ಷಗಳಿಂದ ಮಾಸಿಕ ಕೇವಲ 3700ರೂ ಪಡೆದು ಕಾರ್ಯನಿರ್ವಹಿಸುತ್ತಿದ್ಧಾರೆ. ಮಕ್ಕಳಿಗೆ ಬಿಸಿಯೂಟವನ್ನು ತಯಾರಿಸಿ ನೀಡುವ ಜವಾಬ್ದಾರಿಯುತ ಕಾರ್ಯದಲ್ಲಿ ಅವರು ನಿರತರಾಗಿದ್ಧಾರೆ. ಆದರೆ, ರಾಜ್ಯ ಸರ್ಕಾರ ಮಾತ್ರ ಇವರ ಬೇಡಿಕೆ ಈಡೇರಿಸುವ ಬಗ್ಗೆ ಯಾವುದೇ ಉತ್ಸಾಹ ತೋರುತ್ತಿಲ್ಲ. ಮುಂಬರುವ ಅಧಿವೇಶನದಲ್ಲಿ ಚರ್ಚಿಸಬೇಕೆಂದು ಅವರು ಮನವಿ ಮಾಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕ ಟಿ.ರಘುಮೂರ್ತಿ, ಬಿಸಿಯೂಟ ತಯಾರಿಕ ಮಹಿಳೆಯರ ಕಷ್ಟಗಳ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇದೆ. ವಿದ್ಯಾರ್ಥಿಗಳಿಗೆ ಪ್ರತಿನಿತ್ಯ ಗುಣಮಟ್ಟದ ಆಹಾರವನ್ನು ನೀಡುವ ಕೆಲಸವನ್ನು ಪ್ರಾಮಾಣಿಕತೆಯಿಂದ ಮಾಡುತ್ತಿದ್ಧಾರೆ. ಸರ್ಕಾರ ಈಗ ನೀಡುತ್ತಿರುವ ವೇತನ ಕಡಿಮೆ ಇದ್ದು ಈ ಬಗ್ಗೆ ಮುಖ್ಯಮಂತ್ರಿ ಹಾಗೂ ಸದನದಲ್ಲಿ ವಿಷಯ ಪ್ರಸ್ತಾಪ ಮಾಡುವ ಭರವಸೆ ನೀಡಿದರು.

ಕಾರ್ಯದರ್ಶಿ ದೊಡ್ಡಉಳ್ಳಾರ್ತಿ ಕರಿಯಣ್ಣ, ಖಜಾಂಚಿ ಪಾಲಕ್ಷಮ್ಮ, ಎ.ಎಂ.ಸುನಂದದೇವಿ, ಆರ್.ಎಚ್. ಜಯಲಕ್ಷ್ಮಿ, ನಾಗಮ್ಮ, ಅನುಸೂಯಮ್ಮ, ವಿಜಯಮ್ಮ, ರತ್ನಮ್ಮ, ಎನ್.ನೇತ್ರಾವತಿ, ಸಿ.ಲಕ್ಷ್ಮಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಗಣತಂತ್ರ ವ್ಯವಸ್ಥೆ ದೇಶದ ಐಕ್ಯತೆ ಮತ್ತು ಅಖಂಡತೆಗೆ ಭದ್ರ ಬುನಾದಿ: ಪಾಟೀಲ್



» **ಹೊಸದುರ್ಗ**

ಸ್ವಾತಂತ್ರ್ಯ ದಿನಾಚರಣೆಯಂತೆಯೇ, ಗಣರಾಜ್ಯೋತ್ಸವವು ಕೂಡ ಬಹಳ ಪ್ರಮುಖವಾದ ರಾಷ್ಟ್ರೀಯ ಹಬ್ಬವಾಗಿದೆ. ಗಣತಂತ್ರ ವ್ಯವಸ್ಥೆ ದೇಶದ ಐಕ್ಯತೆ ಮತ್ತು ಅಖಂಡತೆಗೆ ಭದ್ರಬುನಾದಿಯಾಗಿದೆ. ಇಂತಹ ವ್ಯವಸ್ಥೆಯನ್ನು ನಿರ್ಮಾಣ ಮಾಡಿದ ಮಹಾತ್ಮರನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಹಶೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು.ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಗಣರಾಜ್ಯೋತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಬಾರಿಯ ಗಣರಾಜ್ಯೋತ್ಸವದ ಆಚರಣೆ ಬಹಳ ವಿಶಿಷ್ಟ ರೀತಿಯಲ್ಲಿ ನಡೆಯಬೇಕು. ಜನತಂತ್ರ ವ್ಯವಸ್ಥೆ ಜಾರಿಗೊಂಡು 75 ವರ್ಷಗಳು ಸಂಧಿಸಿದ್ದು, ದೇಶದ ಐಕ್ಯತೆ ಮತ್ತು ಅಖಂಡತೆಗೆ ಇದು ಭದ್ರಬುನಾದಿಯಾಗಿದೆ. ಹಲವು ಮಹಾನ್ ನಾಯಕರ ಶ್ರಮದಿಂದಾಗಿ ಹಾಗೂ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ರವರ ಪರಿಶ್ರಮದಿಂದ ಸಂವಿಧಾನ ಜಾರಿಗೆ ಬಂದಿದ್ದು, ದೇಶದ ಪ್ರತಿಯೊಬ್ಬರು ನೆಮ್ಮದಿಯಿಂದ ಜೀವನ ನಡೆಸುತ್ತಿದ್ದಾರೆ ಎಂದು ಹೇಳಿದರು. ಗಣರಾಜ್ಯೋತ್ಸವದ ದಿನದಂದು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ವಿಶೇಷವಾಗಿ ಗೌರವಿಸಲಾಗುವುದು. ಎಲ್ಲಾ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಮಗೆ ನೀಡಿರುವ ಜವಾಬ್ದಾರಿ ಮತ್ತು ಕರ್ತವ್ಯವನ್ನು ಜವಾಬ್ದಾರಿಯುತವಾಗಿ, ನಿಷ್ಠೆಯಿಂದ ಎಲ್ಲಿಯೂ ಲೋಪವಾಗದಂತೆ ನಿರ್ವಹಿಸಬೇಕೆಂದು ಸೂಚನೆ ನೀಡಿದರು. ಈ ವೇಳೆ ಸಭೆಯಲ್ಲಿ ತಾ.ಪ. ಇಓ, ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು, ಸಹಾಯಕ ಕೃಷಿ ನಿರ್ದೇಶಕ ಈಶ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಕಾಳಮ್ಮ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಶಶಿಧರ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ಗಂಗಾಧರಪ್ಪ ಮತ್ತು ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕದ ಅಧ್ಯಕ್ಷ ಓಂಕಾರಪ್ಪ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು

### ತ್ರೈಮಾಸಿಕ ಕೆ.ಡಿ.ಪಿ ಸಭೆ

» **ದಾವಣಗೆರೆ**

ಮಾಯಕೊಂಡ ವಿಧಾನಸಭಾ ಕ್ಷೇತ್ರದ ಕೆ.ಎಸ್.ಬಸವಂತಪ್ಪ ಇವರ ಅಧ್ಯಕ್ಷತೆಯಲ್ಲಿ ಜ.22 ರಂದು ಬೆಳಿಗ್ಗೆ 11 ಗಂಟೆಗೆ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಆಯೋಜಿಸಲಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

### ತಾ.ಪಂ. ಸಾಮಾನ್ಯ ಸಭೆ

» **ದಾವಣಗೆರೆ**

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಗೂ ತಾ.ಪಂ ಆಡಳಿತಾಧಿಕಾರಿ ಎಲ್.ಎ.ಕೃಷ್ಣನಾಯ್ಕ ಇವರ ಅಧ್ಯಕ್ಷತೆಯಲ್ಲಿ ಜ.22 ರಂದು ಮಧ್ಯಾಹ್ನ 3 ಗಂಟೆಗೆ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ತಾಲ್ಲೂಕು ಪಂಚಾಯಿತಿಯ ಸಾಮಾನ್ಯ ಸಭೆಯನ್ನು ಆಯೋಜಿಸಲಾಗಿದೆ ಎಂದು ತಾ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ ತಿಳಿಸಿದ್ದಾರೆ.

### ನಿಧಿ ಆಪ್ಕೆ ನಿಕಾಟ್ 2.0 ಕಾರ್ಯಕ್ರಮ

» **ದಾವಣಗೆರೆ**

ಪ್ರತಿ ಜಿಲ್ಲೆಯಲ್ಲಿ ಪ್ರತಿ ತಿಂಗಳ 27 ರಂದು ನಿಧಿ ಆಪ್ಕೆ ನಿಕಾಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತೆಯ ಅಗತ್ಯಗಳನ್ನು ಪೂರೈಸುವ ಇಪಿಎಫ್ಒ (ನೌಕರರ ಭವಿಷ್ಯ ನಿಧಿ ಸಂಸ್ಥೆ), ಜಿಲ್ಲೆಗಳಲ್ಲಿ ಹೆಜ್ಜೆ ಗುರುತು ಮತ್ತು ಉಪಸ್ಥಿತಿಯನ್ನು ಹೆಚ್ಚಿಸುವ ಉದ್ದೇಶದಿಂದ ಮತ್ತು ಕಾರ್ಮಿಕರಿಗೆ ಲಭ್ಯವಿರುವ ವಿವಿಧ ಪ್ರಯೋಜನಗಳ ಬಗ್ಗೆ ಅರಿವು ಮೂಡಿಸುವುದು ಇದರ ಉದ್ದೇಶವಾಗಿದೆ. ಇದು ಸದಸ್ಯರು ಮತ್ತು ಮಾಹಿತಿ ವಿನಿಮಯ, ಕುಂದುಕೊರತೆ ನಿವಾರಣಾ ವೇದಿಕೆಯಾಗಿ ಕಾರ್ಯನಿರ್ವಹಿಸುವ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಒಗ್ಗೂಡಿಸುವ, ವಿಶಾಲ ಆಧಾರಿತ ಭಾಗವಹಿಸುವಿಕೆಯ ಕಾರ್ಯಕ್ರಮವಾಗಿದೆ. ಅಕ್ಟೋಬರ್ 2023 ರಿಂದ ನಿಧಿ ಆಪ್ಕೆ ನಿಕಾಟ್ 2.0ನ್ನು ವಿಸ್ತರಿಸಲಾಗಿದೆ. ಮತ್ತು ಈಗ ಇದನ್ನು ಇಪಿಎಫ್ಒ ಮತ್ತು ಇಎಸ್ಐಸಿ ಇಲಾಖೆಯ ಅಧಿಕಾರಿಗಳು ಜಂಟಿಯಾಗಿ ನಡೆಸುತ್ತಿದ್ದಾರೆ. ದಾವಣಗೆರೆಯ ಎಸ್.ನಿಜಲಿಂಗಪ್ಪ ಕಾಲೋನಿ, 433, ಮುಖ್ಯರಸ್ತೆ, ಬಕ್ಕೇಶ್ವರ ಕಲ್ಯಾಣ ಮಂಟಪದ ಎದುರು, ಗುರುಕುಲ ವಸತಿ ಶಾಲೆಯಲ್ಲಿ ಜನವರಿ 29 ರಂದು ಮಧ್ಯಾಹ್ನ 2.30 ರಿಂದ 4 ಗಂಟೆಯವರೆಗೆ ಕಾರ್ಯಕ್ರಮವನ್ನು ನಡೆಸಲಾಗುವುದು.

# ಕೇಂದ್ರದ ಕಾನೂನನ್ನು ವಿರೋಧಿಸಿ ಪ್ರತಿಭಟನೆ

» **ಚಳ್ಳಕೆರೆ**

ಕೇಂದ್ರ ಸರ್ಕಾರ ಪ್ರಸ್ತುತ ವರ್ಷದಿಂದ ಜಾರಿಗೆ ತಂದಿರುವ ಹಿಟ್‌ಅಂಡ್‌ರನ್ ಪ್ರಕರಣದಲ್ಲಿ ಚಾಲಕರಿಗೆ 10 ವರ್ಷ ಜೈಲು ಶಿಕ್ಷೆ, 7 ಲಕ್ಷ ದಂಡವಿಧಿಸುವ ಕಾನೂನನ್ನು ಕೂಡಲೇ ರದ್ದು ಮಾಡಬೇಕೆಂದು ಒತ್ತಾಯಿಸಿ ಚಳ್ಳಕೆರೆ ತಾಲ್ಲೂಕು ಲಾರಿಮಾಲೀಕರ ಸಂಘ ಬುಧವಾರ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಚಳ್ಳಕೆರೆ ತಾಲ್ಲೂಕು ಲಾರಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಭರಮಯ್ಯ ಮಾತನಾಡಿ, ತಾಲ್ಲೂಕಿನಾದ್ಯಂತ ಸುಮಾರು 200ಕ್ಕೂ ಹೆಚ್ಚು ಲಾರಿಗಳಿದ್ದು, ಇತ್ತೀಚಿನ ದಿನಗಳಲ್ಲಿ ಸೂಕ್ತ ಸರಕು ಸಾಗಾಣಿಕೆ ಇಲ್ಲದೆ ಲಾರಿ ಮಾಲೀಕರುಹೆಚ್ಚುನಷ್ಟಅನುಭವಿಸುತ್ತಿದ್ದಾರೆ. ವಾರದಲ್ಲಿ ಒಂದೆರಡು ಬಾರಿ ಲಾರಿ ಬಾಡಿಗೆಕೊಟ್ಟರೂ ಅದರಿಂದ ಬರುವ ಹಣದಿಂದ ಡಿಸೇಲ್, ಡ್ರೈವರ್, ರಿಪೇರಿಗೆ ಹಣ ಖರ್ಚು ಮಾಡಿ ಮಾಲೀಕರಿಗೆ ಯಾವುದೇ ಲಾಭವಿಲ್ಲ. ಆದರೆ, ಕೇಂದ್ರ ಸರ್ಕಾರ ಹಿಟ್‌ಅಂಡ್‌ರನ್ ಪ್ರಕರಣ ಮುಂದಿಟ್ಟುಕೊಂಡು ಲಾರಿಯ ಚಾಲಕರು ಮತ್ತು ಮಾಲೀಕರಿಗೆ ಕಿರುಕುಳ ನೀಡುತ್ತಿದೆ. ಈ ಕಾನೂನು ಕೂಡಲೇ ರದ್ದುಪಡಿಸಲು



ನಾವು ಕೇಂದ್ರ ಸರ್ಕಾರಕ್ಕೆ ತಹಶೀಲ್ದಾರ್ ಮೂಲಕ ಮನವಿ ಮಾಡಿದ್ದೇವೆಂದರು.

ಚಳ್ಳಕೆರೆತಾಲ್ಲೂಕುಮಿನಿಲಾರಿಮಾಲೀಕರ ಸಂಘದ ಅಧ್ಯಕ್ಷ ಕೆ.ಟಿ.ಧನಂಜಯರೆಡ್ಡಿ ಮಾತನಾಡಿ, ತಾಲ್ಲೂಕಿನಾದ್ಯಂತ ಸುಮಾರು 300ಕ್ಕೂ ಹೆಚ್ಚು ಮಿನಿಲಾರಿಗಳಿದ್ದು, ಇತ್ತೀಚಿನ ದಿನಗಳಲ್ಲಿ ಎಲ್ಲಾ ವ್ಯವಹಾರ ಕುಂಠಿತಗೊಂಡಿವೆ. ಲಾರಿಗಳನ್ನು ಬಾಡಿಗೆ ಪಡೆಯುವವರ ಸಂಖ್ಯೆಯೂ ಕಡಿಮೆಯಾಗಿದೆ. ಬಾಡಿಗೆ ಸಿಕ್ಕರೂ ಸಹ ಡಿಸೇಲ್ ಹಾಗೂ ಇನ್ನಿತರೆ ವೆಚ್ಚ ಹೆಚ್ಚಿದೆ. ಸರಕು ಸಾಗಾಣಿಕೆ ಸಂದರ್ಭದಲ್ಲಿ ಚಾಲಕರು ವಾಹನಗಳನ್ನು ಜಾಗರೂಕತೆಯಿಂದ ಓಡಿಸದರೂ ಸಹ ಅನಿವಾರ್ಯವಾಗಿ ಅಪಘಾತಕ್ಕೀಡಾಗುತ್ತವೆ, ಇದಕ್ಕೆ ಚಾಲಕನನ್ನು ಹಾಗೂ ಮಾಲೀಕರನಿಗೆ ಹೊಣೆ ಮಾಡುವ ಕೇಂದ್ರ ಸರ್ಕಾರದ ನಿರ್ಧಾರ ನೋವು ತಂದಿದೆ. ಇದರಿಂದ ಲಾರಿ ಉದ್ಯಮಕ್ಕೆ ಕೊಡಲಿಪೆಟ್ಟು ಬೀಳಲಿದ್ದು, ಕೇಂದ್ರ ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲನೆ ನಡೆಸಬೇಕೆಂದು ಒತ್ತಾಯಿಸಿದರು.ಚಳ್ಳಕೆರೆ ತಾಲ್ಲೂಕು ಲಾರಿಟ್ಯಾಂಕರ್ ಮಾಲೀಕರ ಸಂಘದ ಅಧ್ಯಕ್ಷ ಇಮಾಮ್ ಹುಸೇನ್ ಮಾತನಾಡಿ, ತಾಲ್ಲೂಕಿನಾದ್ಯಂತಸುಮಾರು100ಕ್ಕೂಹೆಚ್ಚು ಟ್ಯಾಂಕರ್‌ಗಳಿದ್ದು ಕೇವಲ ಮಿಲ್‌ಗಳಿಂಧ ಎಣ್ಣೆ ಮಾತ್ರ ಸಾಗಾಟ ಮಾಡಬಹುದು. ಬೇರೆ ಯಾವುದೇ ಬಾಡಿಗೆ ಇರುವುದಿಲ್ಲ. ಆದ್ದರಿಂದ ಟ್ಯಾಂಕರ್ ಮಾಲೀಕರು ಖಾಸಗಿ ಮಿಲ್‌ಗಳನ್ನು ಅವಲಂಬಿಸಿದೆ. ಸರಕು ಸಾಗಾಣಿಕೆ ಸಂದರ್ಭದಲ್ಲಿ ಅನಿರೀಕ್ಷಿತವಾಗಿ ಅಪಘಾತವಾದರೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಿ. ಆದರೆ, ಹೆಚ್ಚು ದಂಡ ಹಾಗೂ ಶಿಕ್ಷೆ ವಿಧಿಸುವುದು ಲಾರಿ ಉದ್ಯಮಕ್ಕೆ ಮಾಡಿದ ಅಪಮಾನವಾಗುತ್ತದೆ. ಲಾರಿ ಉದ್ಯಮವನ್ನು ಬೆಳೆಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕಾನೂನು ಜಾರಿಗೆ ತರಲಿ. ಜೈಲು ಶಿಕ್ಷೆ ಹಾಗೂ ಅಧಿಕ ದಂಡ ವಿಧಿಸುವ ಕಾನೂನು ಲಾರಿ ಮಾಲೀಕರು ಹಾಗೂ ಚಾಲಕರಿಗೆ ಬಿಸಿತುಪ್ಪವಾಗಿದೆ ಎಂದರು. ಕೇಂದ್ರ ಸರ್ಕಾರಕೂಡಲೇ ಜಾರಿಗೆ ತಂದ ಕಾನೂನನ್ನು ವಾಪಾಸ್ ಪಡೆದು ಲಾರಿ ಉದ್ಯಮದ ಬೆಳವಣಿಗೆಗೆ ಸಹಕಾರ ನೀಡಬೇಕೆಂದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್ ಪಾಷ, ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಕಳಿಸಿಕೊಡುವ ಭರವಸೆ ನೀಡಿದರು.ಉಪಾಧ್ಯಕ್ಷ ಮಂಜುನಾಥ, ಕಾರ್ಯದರ್ಶಿ ಮಾರುತಿ, ಕೆ.ಜಗದೀಶ್ ಮುಂತಾದವರು ಉಪಸ್ಥಿತರಿದ್ದರು. ದಲ್ಲಾಲರ ಸಮುದಾಯದ ಭವನದಿಂದ ಪ್ರತಿಭಟನಾ ಮೆರವಣಿಗೆ ಬೆಂಗಳೂರು ರಸ್ತೆ, ನೆಹರೂ ವೃತ್ತದ ಮೂಲಕ ತಾಲ್ಲೂಕು ಕಚೇರಿಗೆ ಆಗಮಿಸಿ ತಹಶೀಲ್ದಾರ್‌ಗೆ ಮನವಿ ನೀಡಿದರು. ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು.

## ವಿಶ್ವಮಟ್ಟದಲ್ಲಿ ಭಾರತದ ಇತಿಹಾಸಕ್ಕೆ ಹೆಚ್ಚು ಗೌರವ






» **ಚಳ್ಳಕೆರೆ**

ವಿಶ್ವದಲ್ಲಿಯೇ ಭಾರತದಲ್ಲಿ ಅಡಗಿರುವ ಹಲವಾರು ಇತಿಹಾಸ ಸಂಬಂಧಪಟ್ಟ ವಿಷಯಗಳ ಬಗ್ಗೆ ಇಂದಿಗೂ ಕೌತುಕಮಯ ಪರಿಸ್ಥಿತಿ ಇದೆ. ಕಾರಣ ವಿಶ್ವಕ್ಕೆ ಹೋಲಿಸಿದಲ್ಲಿ ಇತಿಹಾಸದ ಅನೇಕ ಘಟನೆಗಳು ಗತಿಸಿದ್ದು ಭಾರತದಲ್ಲೇ. ಭಾರತದ ಇತಿಹಾಸ ಅನೇಕ ವಿಚಾರಧಾರೆಗಳ ಬಗ್ಗೆ ಬೆಳಕು ಚೆಲ್ಲುವ ಎಲ್ಲಾ ಅಂಶ ಹೊಂದಿದೆ ಎಂದು ಬಾಪೂಜಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಸಹಾಯಕ ಪ್ರಾಧ್ಯಾಪಕ ಆರ್.ಎಸ್. ಉಮೇಶ್ ತಿಳಿಸಿದರು.

ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗ ಅಂತಿಮ ವರ್ಷದ ಇತಿಹಾಸ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ವಿಶೇಷ ಉಪನ್ಯಾಸ ಮಾಲಿಕೆಯನ್ನು ಉದ್ಘಾಟಿಸಿ ಮಾತನಾಡಿದರು.

ಆಧುನಿಕ ವಿಶ್ವದಲ್ಲಿ ರಾಷ್ಟ್ರೀಯತೆಯ ಏಳಿಗೆಗೆ ಕಾರಣಗಳು ಎಂಬ ವಿಚಾರದಲ್ಲಿ ಮಾತನಾಡಿದ ಅವರು, ಇತಿಹಾಸ ನಮ್ಮೆಲ್ಲರಿಗೂ ಗತಿಸಿದ ಕಾಲವೈಭವದ ಬಗ್ಗೆ ಹಲವಾರು ಉಪಯುಕ್ತ ಮಾಹಿತಿಯನ್ನು ನೀಡುತ್ತಾ ಬಂದಿದೆ. ಇತಿಹಾಸವಿಲ್ಲದಿದ್ದರೆ ನಾವು ಏನನ್ನೂ ಅರಿಯಲು ಸಾಧ್ಯವಾಗುವುದಿಲ್ಲ.

ನಮ್ಮ ಇತಿಹಾಸದ ನಮಗೆ ಹಲವಾರು ರೀತಿಯಲ್ಲಿ ಮಾರ್ಗದರ್ಶನವಾಗಿದೆ. ಇತಿಹಾಸದ ಕಲ್ಪನೆ ಅತ್ಯಂತ ರೋಚಕವಾಗಿದ್ದು, ಭಾರತದ ಇತಿಹಾಸದ ಬಗ್ಗೆ ವಿಶ್ವವೇ ಹೆಮ್ಮೆಪಡುವ ಸ್ಥಿತಿ ಇದೆ ಎಂದರು.

ಕಾಲೇಜು ಪ್ರಾಚಾರ್ಯ ಡಾ.ಆರ್.ರಂಗಪ್ಪ ಮಾತನಾಡಿ, ಅಂತಿಮ ವರ್ಷದ ಇತಿಹಾಸ ವಿದ್ಯಾರ್ಥಿಗಳಿಗೆ ಈ ವಿಶೇಷ ಉಪನ್ಯಾಸ ಮಾಲಿಕೆ ಇತಿಹಾಸದ ಬಗ್ಗೆ ಇರುವ ಹಲವಾರು ಘಟನೆಗಳ ಬಗ್ಗೆ ಬೆಳಕು ಚೆಲ್ಲುವಲ್ಲಿ ಯಶಸ್ವಿಯಾಗಿದೆ. ವಿದ್ಯಾರ್ಥಿಗಳು ತಮ್ಮ ಕಲಿಕಾ ಅವಧಿಯನ್ನು ಪೂರ್ಣಪ್ರಮಾಣದಲ್ಲಿ ಸದುಪಯೋಗ ಪಡಿಸಿಕೊಳ್ಳಬೇಕು. ಇತಿಹಾಸ ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥೆ ಡಾ.ಬಿ.ಜಯಮ್ಮ, ಸಂಚಾಲಕ ಎಚ್.ತಿಪ್ಪೇಸ್ವಾಮಿ, ಡಾ.ರಾಜ್‌ಕುಮಾರ್, ಮಾರುತಿ, ಬಿ.ಪರಮೇಶ್ ಮುಂತಾದವರು ಪಾಲ್ಗೊಂಡಿದ್ದರು.

## ಕನ್ನಡಪರ ಹೋರಾಟಗಾರರಿಗೆ ಕೊಲೆ ಬೆದರಿಕೆ: ಪ್ರತಿಭಟನೆ




» **ಚಿತ್ರದುರ್ಗ**

ಬೆಳಗಾವಿಯಲ್ಲಿ ಎಂ.ಇ.ಎಸ್. ಪುಂಡರು ಕನ್ನಡಪರ ಹೋರಾಟಗಾರರಾದ ಅನಿಲ್ ದಡ್ಡಮನಿ, ಸಂಪತ್‌ಕುಮಾರ್ ಇವರುಗಳಿಗೆ ಕೊಲೆ ಬೆದರಿಕೆ ಹಾಕಿರುವುದನ್ನು ಖಂಡಿಸಿ ಕರುನಾಡ ವಿಜಯಸೇನೆಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಮಹಾರಾಷ್ಟ್ರದ ಗಡಿಭಾಗ ದಲ್ಲಿರುವಬೆಳಗಾವಿಯಲ್ಲಿಮರಾಠಿ ಎಂ.ಇ.ಎಸ್.ನವರು ಕನ್ನಡಪರ ಹೋರಾಟಗಾರರನ್ನು ಪದೆ ಪದೆ ಅವಮಾನಿಸುತ್ತಿರುವುದನ್ನು ಸಹಿಸಲಾಗುವುದಿಲ್ಲ. ಅನಿಲ್ ದಡ್ಡಮನಿ, ಸಂಪತ್ ಕುಮಾರ್ ಇವರುಗಳಿಗೆ ಇನ್‌ಸ್ಟಾಗ್ರಾಂನಲ್ಲಿ ಕೊಲೆ ಬೆದರಿಕೆ ಹಾಕಿರುವವರನ್ನು ಕೂಡಲೆಬಂಧಿಸಿಎಂ.ಇ.ಎಸ್.ನ್ನು ನಿಷೇಧಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಕರುನಾಡ ವಿಜಯಸೇನೆಯಿಂದ ಉಗ್ರ ಹೋರಾಟನಡೆಸಲಾಗುವುದೆಂದು ಪ್ರತಿಭಟನಾನಿರತರು ಎಚ್ಚರಿಸಿದರು. ಕಾಂಗ್ರೆಸ್, ಬಿಜೆಪಿ. ಜೆಡಿಎಸ್. ಮೂರು ಪಕ್ಷಗಳು ಮರಾಠಿಗರ ಮತಕ್ಕಾಗಿ ಕನ್ನಡಕ್ಕೆ ಎಷ್ಟೆ ಅವಮಾನವಾದರೂ ನೋಡಿಕೊಂಡುಸುಮ್ಮನಿರುವುದು ಯಾವ ನ್ಯಾಯ? ಕನ್ನಡ ನಾಡಿನ ಹಿತದೃಷ್ಟಿಯಿಂದ ಎಂ.ಇ.ಎಸ್. ಪುಂಡಾಟಿಕೆಗೆ ಕಡಿವಾಣ ಹಾಕಬೇಕು. ಇಲ್ಲದಿದ್ದರೆಮುಂದಿನ ದಿನಗಳಲ್ಲಿ ಮೂರು ಪಕ್ಷಗಳಿಗೂ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಕರುನಾಡ ವಿಜಯಸೇನೆ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ಕಾರ್ಯದರ್ಶಿ ಜಗದೀಶ್ ಸಿ. ಉಪಾಧ್ಯಕ್ಷೆ ರತ್ನಮ್ಮ, ಯುವ ಘಟಕದ ಅಧ್ಯಕ್ಷ ನಾಗರಾಜ್ ಮುತ್ತು, ನಗರಾಧ್ಯಕ್ಷ ಅವಿನಾಶ್, ಮಹಮದ್ ರಫಿ, ಶಾನ್, ಸುರೇಶ್, ಅಖಿಲೇಶ್, ಹರೀಶ್, ಪ್ರದೀಪ್, ರಾಜಣ್ಣ, ಮಣಿಕಂಠ ಇವರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಕೌಟುಂಬಿಕ ಕಲಹಗಳ ಏರುಮುಖ: ಮ.ಕರಣ್ಣನವರ

» **ದಾವಣಗೆರೆ**

ಗಂಡ ಹೆಂಡಿರ ಮಧ್ಯದಲ್ಲಿನ ಜಗಳದಿಂದಾಗಿ ಮಕ್ಕಳ ಭವಿಷ್ಯವು ಕೂಡಾ ಮಂಕಾಗುತ್ತಿರುವುದು ವಿಷಾದನಿಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣನವರು ತಿಳಿಸಿದರು.

ಬುಧವಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರ ಕಚೇರಿ ಸಭಾಂಗಣದ ಏರ್ಪಡಿಸಲಾಗಿದ್ದ ಡಿ.ವಿ.ಆಕ್ಟ್ ಕಾಯ್ದೆ ಕುರಿತು ಭಾಗಿದಾರ ಇಲಾಖಾ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ 2 ದಿನಗಳ



ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತಾನಾಡಿದರು. ಇತ್ತಿಚೀನ ದಿನಗಳಲ್ಲಿ ಕೌಟುಂಬಿಕ ಕಲಹಗಳು ಹೆಚ್ಚಾಗುತ್ತಿದ್ದು, ಕುಟುಂಬದ ಸದಸ್ಯರ ಮಧ್ಯದಲ್ಲಿನ ಸಾಮರಸ್ಯ ಕಡಿಮೆ ಆಗುತ್ತಿದೆ. ಈ ನಿಟ್ಟಿನಲ್ಲಿ ಕೌಟುಂಬಿಕ ಸಮಸ್ಯೆಗಳು ಬಂದಾಗ ತಕ್ಷಣ ಅವುಗಳಿಗೆ ಪರಿಹಾರ ಕಂಡುಕೊಳ್ಳಬೇಕೆಂದು ತಿಳಿಸಿದರು.

ಕಾನೂನಿನ ಅವಶ್ಯಕತೆ ಇದ್ದವರು ಸದುಪಯೋಗ ಪಡೆಯಬೇಕಾಗಿರುತ್ತದೆಯಾದ ರೂ, ಕೆಲವೊಂದು ಪ್ರಕರಣಗಳಲ್ಲಿ ಕಾನೂನನ್ನು ದುರುಪಯೋಗ ಮಾಡಿಕೊಂಡಿರುವುದು ಬೆಳಕಿಗೆ ಬಂದಿರುತ್ತದೆ. ಯಾವುದೇ ಕಾರಣಕ್ಕೂ ಕಾನೂನಿನ ದುರುಪಯೋಗ ಆಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

**ಪ್ರಮುಖ ಸುದ್ದಿ**

# ಪ್ರೌಢಶಾಲಾ ವಿಜ್ಞಾನ ಶೈಕ್ಷಣಿಕ ಕಾರ್ಯಾಗಾರಕ್ಕೆ ಚಾಲನೆ

» **ಚಿತ್ರದುರ್ಗ**

ಜೀವನದಲ್ಲಿ ಯಾರು ಎಷ್ಟೆ ಉನ್ನತ ಹುದ್ದೆ ಪಡೆದುಕೊಂಡರೂ ಅದರ ಹಿಂದೆ ಶಿಕ್ಷಕರುಗಳ ಮಾರ್ಗದರ್ಶನ, ಪರಿಶ್ರಮವಿರುತ್ತದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೋಮಶೇಖರ್ ಎಸ್.ಜೆ. ಹೇಳಿದರು.

ಉಪ ನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮತ್ತು ತಾಲ್ಲೂಕು ಪ್ರೌಢಶಾಲಾ ವಿಜ್ಞಾನ ಶಿಕ್ಷಕರ ಕ್ಲಬ್ ಸಹಯೋಗದಲ್ಲಿ ತ.ರಾ.ಸು. ರಂಗಮಂದಿರದಲ್ಲಿಗುರುವಾರನಡೆದಜಿಲ್ಲಾ ಮಟ್ಟದ ವಿಜ್ಞಾನ ಶೈಕ್ಷಣಿಕ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದುದು. ಮಕ್ಕಳಿಗೆ ಪಾಠ ಹೇಳಿಕೊಡುವ ಜೊತೆಗೆ ಶಿಕ್ಷಕರುಗಳಿಗೆ ಕೆಲವೊಮ್ಮೆ ಅನೇಕ ಜವಾಬ್ದಾರಿಗಳನ್ನು ವಹಿಸಲಾಗುವುದು. ಹಾಗಾಗಿ ಒತ್ತಡದ ನಡುವೆ ಶಿಕ್ಷಕರುಗಳು ಕೆಲಸ ಮಾಡಬೇಕಾಗುತ್ತದೆ. ಸಮಾಜದಲ್ಲಿ ಉತ್ತಮ ಪ್ರಜೆಗಳನ್ನು ನಿರ್ಮಿಸಿ ಸದೃಢ ಸಮಾಜ ಕಟ್ಟುವ ಹೊಣೆಗಾರಿಕೆಯೂ



ನಿಮ್ಮ ಮೇಲಿದೆ ಎಂದು ತಿಳಿಸಿದರು.

2022–23 ನೇ ಸಾಲಿನಲ್ಲಿ ಚಿತ್ರದುರ್ಗ ಜಿಲ್ಲೆ ಹತ್ತನೆ ತರಗತಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಮೊದಲ ಸ್ಥಾನ ಗಳಿಸಿ ಕೀರ್ತಿ ತಂದಿರುವುದು ಅತ್ಯಂತ ಹೆಮ್ಮೆಯ ಸಂಗತಿ. ಡಿ.ಡಿ.ಪಿ.ಐ. ಕೆ.ರವಿಶಂಕರ್‌ರೆಡ್ಡಿಯವರಲ್ಲಿ ಬದ್ದತೆಯಿದೆ. ಮಕ್ಕಳ ಹಿತದೃಷ್ಟಿಯಿಂದ ಒಮ್ಮೆ ನಡುರಾತ್ರಿ ಹನ್ನೆರಡು ಗಂಟೆಯಲ್ಲಿ ನನ್ನ ಮನೆಗೆ ಬಂದು ಕಡತಕ್ಕೆ ಸಹಿ ಮಾಡಿಸಿಕೊಂಡು ಹೋದರು ಎನ್ನುವುದನ್ನು ನೆನಪಿಸಿಕೊಂಡು ಅವರಲ್ಲಿ ಬದ್ದತೆಯಿದೆ ಎಂದರು.ವಿಜ್ಞಾನ ಶೈಕ್ಷಣಿಕ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ನೀಡುವ ಉಪನ್ಯಾಸವನ್ನು ಗಮನ ಕೊಟ್ಟು ಕೇಳಿ ನಿಮ್ಮಲ್ಲಿ ಏನಾದರು ಗೊಂದಲಗಳಿದ್ದರೆ ಪರಿಹರಿಸಿಕೊಂಡು ವಿಜ್ಞಾನವನ್ನು ಸರಳೀಕರಣಗೊಳಿಸಿಕೊಂಡು ಮಕ್ಕಳ ಮನಸ್ಸಿಗೆ ನಾಟುವ ರೀತಿಯಲ್ಲಿ ಬೋಧಿಸಿ ಎಂದು ಹೇಳಿದರು. ಸಾರ್ವಜನಿಕ ಶಿಕ್ಷಣ ಇಲಾಖೆಉಪನಿರ್ದೇಶಕಕೆ.ರವಿಶಂಕರ್‌ರೆಡ್ಡಿ ಮಾತನಾಡಿ ನನ್ನ ಅಧಿಕಾರವಧಿಯಲ್ಲಿ ಶಿಕ್ಷಕರುಗಳ ಏನೆ ಸಮಸ್ಯೆಗಳಿದ್ದರೂ ತಕ್ಷಣವೆ ಸ್ಪಂದಿಸುತ್ತೇನೆ. ನಿಮ್ಮಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕೆನ್ನುವುದು ನನ್ನ ಉದ್ದೇಶ. ಕಳೆದ ಸಾಲಿನಲ್ಲಿ ನಮ್ಮ ಜಿಲ್ಲೆ ಹತ್ತನೆ ತರಗತಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಗಳಿಸಿರುವುದರ ಹಿಂದೆ ಅನೇಕ ಅಧಿಕಾರಿಗಳ ಹಾಗೂ ಶಿಕ್ಷಕರುಗಳ ಶ್ರಮವಿದೆ. ಪೋಷಕರು ಹಾಗೂ ಶಿಕ್ಷಕರುಗಳು ಮಕ್ಕಳಿಗೆ ಊರುಗೋಲಾಗಿ ನಿಲ್ಲಬೇಕು ಎಂದು ಮನವಿ ಮಾಡಿದರು.

ಶಿಕ್ಷಣಾಧಿಕಾರಿಗಳಾದ ಎನ್. ಆರ್.ತಿಪ್ಪೇಸ್ವಾಮಿ, ಸಿದ್ದಪ್ಪ, ವಿಷಯ ಪರಿವೀಕ್ಷಕರುಗಳಾದ ಗೋವಿಂದಪ್ಪ, ಸವಿತ, ಚಂದ್ರಣ್ಣ, ಬಸವರಾಜ್ ಓಲೇಕಾರ್, ಸಂಪನ್ಮೂಲ ವ್ಯಕ್ತಿ ರಾಘವೇಂದ್ರಭಟ್, ಮುಖ್ಯ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಹೆಚ್.ನಾಗೇಂದ್ರಪ್ಪ, ಚಿತ್ರದುರ್ಗ ತಾಲ್ಲೂಕು ಸಹ ಶಿಕ್ಷಕರ ಸಂಘದ ಅಧ್ಯಕ್ಷ ಶಿವಣ್ಣ, ಜಿಲ್ಲಾ ವಿಜ್ಞಾನ ಶಿಕ್ಷಕರ ಕ್ಲಬ್‌ನ ಅಧ್ಯಕ್ಷ ಬಿ.ವಿ.ನಾಥ ವೇದಿಕೆಯಲ್ಲಿದ್ದರು. ಶಿಕ್ಷಕ ಡಾ.ಕೆ. ಮಹೇಶ್ ಸೇರಿದಂತೆ ಜಿಲ್ಲೆಯ ವಿಜ್ಞಾನ ಶಿಕ್ಷಕರುಗಳು ಶೈಕ್ಷಣಿಕ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.ಕಳೆದ ಸಾಲಿನಲ್ಲಿ ಹತ್ತನೆ ತರಗತಿ ಪರೀಕ್ಷೆ ವಿಜ್ಞಾನದಲ್ಲಿ ನೂರಕ್ಕೆ ನೂರು ಅಂಕ ಗಳಿಸಿದ ವಿದ್ಯಾರ್ಥಿಗಳು, ಪಿ.ಹೆಚ್.ಡಿ. ಪಡೆದಿರುವ ವಿಜ್ಞಾನ ಸಹ ಶಿಕ್ಷಕರು, ರಾಜ್ಯ ಮತ್ತು ಜಿಲ್ಲಾ ಉತ್ತಮ ವಿಜ್ಞಾನ ಶಿಕ್ಷಕ ಪ್ರಶಸ್ತಿ ಪುರಸ್ಕೃತರು ಹಾಗೂ ನಿವೃತ್ತ ವಿಜ್ಞಾನ ಶಿಕ್ಷಕರುಗಳನ್ನು ಸನ್ಮಾನಿಸಲಾಯಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T